ಸಂಪುಟ : 10 ಸಂಚಿಕೆ: 141 ಪುಟ : 4+2 ಬೆಲೆ: 3.00 ಮಂಗಳವಾರ ಜುಲೈ 08 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 141 Pages : 4+2 Price : 3.00 Tuesday July 08 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಅಲೈದೇವರು ನುಡಿದ ರಾಜಕೀಯ ಭವಿಷ್ಯ 'ಕೈ ಮೇಲು ಗೈ'



■ ವಿಜಯಸಾಕ್ಷಿ ಸುದ್ದಿ, ರೋಣ

ಮಾರನಬಸರಿ ಗ್ರಾಮದ ದೊಡ್ಡ ಮಸೂತಿ ದೊಡ್ಡ ದೇವರು ಈ ಬಾರಿಯೂ ರಾಜಕೀಯ ವಿದ್ಯಾಮಾನವನ್ನು ತೋರ್ಪಡಿಸಿದ್ದು, ರಾಜ್ಯದಲ್ಲಿ ಯಾವುದೇ ಚುನಾವಣೆ ನಡೆದರೂ ಕೈ ಮೇಲುಗೈ ಸಾಧಿಸಲಿದೆ ಎಂದು ಭವಿಷ್ಯ ನುಡಿದಿದೆ. ಗ್ರಾಮದ ಅಲೈದೇವರು ರಾಜಕೀಯದ ಬಗ್ಗೆ ನಿಖರ ಮಾಹಿತಿ ನೀಡುವುದು ಇಲ್ಲಿನ ವಾಡಿಕೆಯಾಗಿದ್ದು ಹಲವು ಸಂದರ್ಭಗಳಲ್ಲಿ ಅದು ನಿಜವೂ ಆಗಿದೆ. ಹೀಗಾಗಿ, ಇಲ್ಲಿ ರಾಜಕೀಯ ಭವಿಷ್ಯ ಅರಿಯಲು ಸಾವಿರಾರು ಭಕ್ತರು ಆಗಮಿಸುತ್ತಾರೆ. ಕತ್ತಲ್ ರಾತ್ರಿಯ ಬೆಳಗಿನ ಜಾವ ದೊಡ್ಡ ಮಸೂತಿಯ ದೊಡ್ಡ ದೇವರು ಹಳೆ ಗ್ರಾ.ಪಂ ದ್ವಜ ಕಟ್ಟೆಯ ಮೇಲೆ ನಿಂತು ಹಸ್ತದ ಚಿಹ್ನೆ ಗೆಲ್ಲಲಿದೆ ಎಂದು ತೋರ್ಪಡಿಸಿದ್ದು ಭಕ್ತರಲ್ಲಿ ಚರ್ಚೆಗೆ ಕಾರಣವಾಗಿದೆ. ಅಲ್ಲದೆ ದ್ವಜದ ಕಟ್ಟೆ ಹತ್ತಿ ಉತ್ತತ್ತಿ ಎಸೆದಾಗ ಮಿಶ್ರ ಸರಕಾರ ರಾಜ್ಯ, ದೇಶದಲ್ಲಿ ಬರುತ್ತದೆ ಎಂಬ ನಂಬಿಕೆಯಿದ್ದು, ಅದು ಕೂಡ ನಿಜವಾಗಿದೆ. ಇನ್ನು ಅಲೈದೇವರ ಹೇಳಿಕೆ ಬಗ್ಗೆ ಭಕ್ತರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ರಾಜ್ಯದಲ್ಲಿ ಕಾಂಗ್ರೆಸ್ ನೇತೃತ್ವದ ಸರಕಾರ ಬಂದರೂ ಸಹ ಅದರಲ್ಲಿ ಎರಡು ಪಕ್ಷಗಳ ಶಾಸಕರಿರುತ್ತಾರೆ ಎನ್ನುವುದು ಒಂದು ಕಡೆಯಾದರೆ, ಕೇಂದ್ರ ಸರಕಾರ ಪತನವಾಗಲಿದ್ದು, ಹಲವು ಪಕ್ಷಗಳು ಕೂಡಿ ಕಾಂಗ್ರೆಸ್ ನೇತೃತ್ವದಲ್ಲಿ ಸರಕಾರ ರಚನೆ ಮಾಡಲಿವೆ ಎನ್ನುವುದು ಮತ್ತೊಂದು ಕಡೆಯ ಭಕ್ತರ ವಿಚಾರವಾಗಿದೆ.

## ವಾಸ್ತವಿಕ ಸತ್ಯ ತೆರೆದಿಟ್ಟ ರಾಯರೆಡ್ಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ, ಕಾಂಗ್ರೆಸ್ ನಾಯಕ ಬಸವರಾಜ ರಾಯರೆಡ್ಡಿ ಅವರು ರಾಜ್ಯದ ಆರ್ಥಿಕ ಸ್ಥಿತಿಯ ಬಗ್ಗೆ ವಾಸ್ತವ ಸಂಗತಿಗಳನ್ನು ಬಹಿರಂಗಪಡಿಸಿದ್ದಾರೆ ಎಂದು ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ರಾಯ-ರೆಡ್ಡಿ ಅವರಿಗೆ ರಾಜ್ಯದ ಆರ್ಥಿಕ ಅಂಶಗಳ ಬಗ್ಗೆ ವ್ಯಾಪಕ ಜ್ಞಾನವಿದೆ. ಸರ್ಕಾರಿ ನೌಕರರು ವೇತನ ಪಡೆಯುವಲ್ಲಿ ವಿಳಂಬ ಅನುಭವಿಸುತ್ತಿದ್ದಾರೆ. ರಸ್ತೆ ಮತ್ತು ಅಭಿವೃದ್ಧಿ ಯೋಜನೆಗಳನ್ನು ಮುಂದುವರಿಸಲು ಅವರು ಗ್ಯಾರಂಟಿಗಳನ್ನು ತ್ಯಜಿಸಬೇಕು ಎಂದು ಸಿದ್ದರಾಮಯ್ಯ ಅವರು ತಮ್ಮ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅವರ ಮೂಲಕ ರಾಜ್ಯದ ಜನರಿಗೆ ತಿಳಿಸುತ್ತಿದ್ದಾರೆ ಎಂದು ಸಂತೋಷ ಅಕ್ಕಿ ಆರೋಪಿಸಿದ್ದಾರೆ.

### ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಚಿವ ಎಸ್. ಮಧು ಬಂಗಾರಪ್ಪ

# ಗುಣಾತ್ಮಕ ಶಿಕ್ಷಣಕ್ಕೆ ಪ್ರಥಮಾದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಇಲಾಖೆಯಲ್ಲಿ ಕಳೆದ ಬಾರಿಗಿಂತ ಹಾಜರಾತಿ ಕಡಿಮೆ ಇದ್ದ ಶಾಲೆಗಳ ಬಗ್ಗೆ ಗಮನ ವಹಿಸಿ ಮಕ್ಕಳನ್ನು ಶಾಲೆಗೆ ಕರೆತರತಂದು, ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡಲು ಹೆಚ್ಚಿನ ಆದ್ಯತೆ ನೀಡಬೇಕು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಸಚಿವ ಎಸ್. ಮಧು ಬಂಗಾರಪ್ಪ ಸೂಚಿಸಿದರು. ಗದಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ಶಾಲೆಯಲ್ಲಿ ಶೇ. 97 ಮಕ್ಕಳ ಹಾಜರಾತಿ ಕಡ್ಡಾಯ ಇರುವಂತೆ ಶಿಕ್ಷಕರು ಮುತುವರ್ಜಿ ವಹಿಸಬೇಕು. ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿದರೆ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ. ಕಳೆದ ಬಾರಿಗಿಂತ ಈ ಬಾರಿ ಫಲಿತಾಂಶ ಕಡಿಮೆ ಆಗಿರಬಹುದು. ಆದರೆ ಮಕ್ಕಳಿಗೆ ನಕಲು ಮಾಡಲು ಬಿಟ್ಟುಕೊಟ್ಟಿಲ್ಲ. ಶಿಕ್ಷಕರ ಮೂಲಕ ಮಕ್ಕಳಿಗೆ ಮೇಲಿಂದ ಮೇಲೆ ಪರೀಕ್ಷೆಗಳನ್ನು ನಡೆಸಿ, ಮಕ್ಕಳು ಸ್ವಂತ ಬಲದಿಂದ ಬರೆಯುವಂತೆ ನೋಡಿಕೊಳ್ಳಲಾಯಿತು. ಹಾಗಾಗಿ ಫಲಿತಾಂಶ ಕಡಿಮೆ ಬಂದರೂ ಉತ್ತಮ್ಮ ಪ್ರಕ್ರಿಯೆ ನಡೆದಿದೆ ಎಂದು ತಿಳಿಸಿದರು.

> ರಾಜ್ಯದಲ್ಲಿ ಸರ್ಕಾರದಿಂದ ಎಲ್‌ಕೆಜಿ, ಯುಕೆಜಿ ಆರಂಭಿಸಲಾಗಿದೆ. ಕಳೆದ ವರ್ಷ ಕಲ್ಯಾಣ ಕರ್ನಾಟಕದಲ್ಲಿ ಆರಂಭಿಸಲಾಗಿತ್ತು. ಈ ಬಾರಿ ರಾಜ್ಯದ ಉಳಿದ ಭಾಗಗಳಲ್ಲಿ 4000 ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಆರಂಭಿಸಲಾಗುತ್ತಿದೆ. ಗದಗ ಜಿಲ್ಲೆಯಲ್ಲಿ 65 ಎಲ್‌ಕೆಜಿ, ಯುಕೆಜಿಗಳಿಗೆ ಅನುಮೋದನೆ ನೀಡಲಾಗಿತ್ತು. ಇನ್ನೂ ಹೆಚ್ಚಿನ ಅನುಮೋದನೆ ನೀಡಲಾಗುವುದು ಎಂದು ಸಚಿವ ಮಧು ಬಂಗಾರಪ್ಪ ಹೇಳಿದರು.



ಎಲ್ಲ ಶಾಲೆಗಳಲ್ಲಿಯೂ ಮಕ್ಕಳು ಸಂವಿಧಾನ ಪೀಠಿಕೆಯನ್ನು ಓದುವಂತೆ ನೋಡಿಕೊಳ್ಳಬೇಕು. ಶಾಲಾ ಮಕ್ಕಳಿಗೆ ಪಠ್ಯಪುಸ್ತಕ ವಿತರಣೆ, ಸಮವಸ್ತ್ರ ವಿತರಣೆಯಾಗಿರುವ ಕುರಿತು ನಿಗಾ ವಹಿಸಬೇಕು. ಶಾಲಾ ಕೊಠಡಿಗಳ ದುರಸ್ತಿ, ಹೊಸ ಕಟ್ಟಡಗಳಿಗೆ ಅನುದಾನ ಸಿಗಬೇಕು ಎಂದು ಶಾಸಕರು ಆಗ್ರಹಿಸುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ಬಾರಿಗಿಂತ ಅಧಿಕ ಅನುದಾನವನ್ನು ಶಿಕ್ಷಣ ಇಲಾಖೆಗೆ ನೀಡಿದ್ದಾರೆ ಎಂದು ಹೇಳಿದರು.

ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಮಾತನಾಡಿ, ಜುಲೈ ತಿಂಗಳೊಳಗಾಗಿ ಪ್ರವೇಶ ಪ್ರಕ್ರಿಯೆ ಅಧಿಕಗೊಳ್ಳಬೇಕು. ಶಾಲಾ ಶೌಚಾಲಯಗಳ ಕಡಿಮೆ ದುರಸ್ತಿಗೆ 5 ಕೋಟಿಗೂ ಅಧಿಕ ಹಣ ಬೇಕು. ಪೂರ್ಣ ದುರಸ್ತಿಗೆ 26 ಕೋಟಿ ಅಗತ್ಯವಿದೆ. ಹಾಗಾಗಿ, ದುರಸ್ತಿಗೆ ಶೇ. 50ರಷ್ಟು ಅನುದಾನ ನೀಡಬೇಕು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರಲ್ಲಿ ಕೋರಿದರು. ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಆದ್ರಳ್ಳಿಯಲ್ಲಿರುವ ಶಾಲೆಯಲ್ಲಿ 650ಕ್ಕೂ ಅಧಿಕ ಮಕ್ಕಳ ದಾಖಲಾತಿಯಿದೆ. ಆ ಶಾಲೆಯನ್ನು ಕೆಪಿಎಸ್ (ಕರ್ನಾಟಕ ಪಬ್ಲಿಕ ಶಾಲೆ) ಮಾಡಬೇಕು ಎಂದು ಸಚಿವರ ಗಮನಕ್ಕೆ ತಂದರು. ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಜಿಲ್ಲೆಯಲ್ಲಿಯ ಹಳೆ ಶಾಲಾ ಕಟ್ಟಡಗಳಿಗೆ ಕಾಯಕಲ್ಪ ಆಗಬೇಕಿದೆ. ಫಲಿತಾಂಶ ಸುಧಾರಣೆಗೆ ಒತ್ತು ನೀಡಬೇಕಿದೆ. ಮುಂಡರಗಿ ತಾಲೂಕಾ ಕೇಂದ್ರದಲ್ಲಿ ಸರ್ಕಾರಿ ಪ್ರೌಢಶಾಲೆ ಈವರೆಗೂ ಸ್ಥಾಪನೆಯಾಗಿಲ್ಲ. ಶಿಕ್ಷಣ ಸಚಿವರು ಈ ಕುರಿತು ಗಮನ ಹರಿಸಬೇಕು ಎಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಸತತ ಮೂರು ವರ್ಷಗಳಿಂದ ಫಲಿತಾಂಶ ಕಡಿಮೆ ಇರುವ ಶಾಲೆಗಳಿಗೆ ನೀಡುವ ಅನುದಾನ ಕಡಿತಗೊಳಿಸುವ ಕುರಿತು ಹೊರಡಿಸಲಾದ ಸರ್ಕಾರದ ಆದೇಶ ಹಿಂಪಡೆಯಬೇಕು ಎಂದು ಸಚಿವರಲ್ಲಿ ಕೋರಿದರು. ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, 2025-26ನೇ ಸಾಲಿಗೆ ಜಿಲ್ಲೆಯಲ್ಲಿ 698 ಶಿಕ್ಷಣ ಇಲಾಖೆ, 22 ಸಮಾಜ ಕಲ್ಯಾಣ ಇಲಾಖೆ, 2 ಸ್ಥಳೀಯ ಸಂಸ್ಥೆ, 148 ಅನುದಾನಿತ, 242 ಅನುದಾನ ರಹಿತ, 7 ಇತರೆ ಸರಕಾರಿ, 1 ಕೇಂದ್ರ ಸರಕಾರದ ಶಾಲೆ ಹೀಗೆ ಒಟ್ಟು 1,120 ಶಾಲೆಗಳಿವೆ ಎಂದು ಸಭೆಗೆ ಮಾಹಿತಿ ನೀಡಿದರು.

> ಜಿಲ್ಲೆಯಲ್ಲಿ ಓದಿನ ಮನೆ ಮೂಲಕ ಶಿಕ್ಷಣದ ಗುಣಮಟ್ಟ ಸುಧಾರಣೆಗೆ ಕ್ರಮ ವಹಿಸಿದೆ. ಹೆಣ್ಣುಮಕ್ಕಳಿಗಾಗಿ ಪ್ರತ್ಯೇಕ ಪಿಂಕ್ ಟಾಯ್ಲೆಟ್ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಈ ಎರಡೂ ಯೋಜನೆಗಳು ಉತ್ತಮವಾಗಿದ್ದು, ಅವುಗಳನ್ನು ರಾಜ್ಯಾದ್ಯಂತ ವಿಸ್ತರಿಸಬೇಕು. ಈ ವರ್ಷ ಈಗಾಗಲೇ ಶಾಲೆಗಳು ಆರಂಭವಾಗಿದ್ದು, ಜಿಲ್ಲೆಯಲ್ಲಿ ಆಗಸ್ಟ್ 15ರೊಳಗಾಗಿ ಶಾಲಾ ಕೊಠಡಿಗಳು ಬಳಕೆಗೆ ಯೋಗ್ಯವಾಗಿರುವ ಕುರಿತು ಅಧಿಕಾರಿಗಳು ವರದಿ ಸಲ್ಲಿಸಬೇಕು.
>
> **- ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಪ್ರಾದಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಸಿ.ಇ.ಓ ಭರತ್ ಎಸ್, ಅಪರ ಆಯುಕ್ತೆ ಜಯಶ್ರೀ ಶಿಂತ್ರಿ, ಸೇರಿದಂತೆ ಶಿಕ್ಷಣ ಇಲಾಖೆ ಅಧಿಕಾರಿ-ಸಿಬ್ಬಂದಿಗಳು ಹಾಜರಿದ್ದರು.

### ಶಿಕ್ಷಕರ ಆನ್‌ಲೈನ್ ಹಾಜರಾತಿ 'ಪ್ರತ್ಯಕ್ಷ' ಕಾರ್ಯಕ್ರಮಕ್ಕೆ ಶಿಕ್ಷಣ ಸಚಿವ ಎಸ್. ಮಧು ಬಂಗಾರಪ್ಪ ಚಾಲನೆ

# ನಕಲಿ ಹಾಜರಾತಿಗಿನ್ನು ಅವಕಾಶವಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಂದಿನ ಒಂದು ತಿಂಗಳೊಳಗಾಗಿ ರಾಜ್ಯದಲ್ಲಿ ಶಾಲಾ ಮಕ್ಕಳ ಫೇಸ್ ರೀಡಿಂಗ್ ಹಾಜರಾತಿ ಪ್ರಕ್ರಿಯೆಗೆ ಚಾಲನೆ ನೀಡಲಾಗುವುದು ಎಂದು ಸಚಿವ ಎಸ್. ಮಧು ಬಂಗಾರಪ್ಪ ಹೇಳಿದರು.

ಗದಗ ನಗರದ ಜಿಲ್ಲಾಡಳಿತ ಭವನದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ, ಸಾಕ್ಷರತಾ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶಿಕ್ಷಕರ ಫೇಸ್ ರೀಡಿಂಗ್ ಆನ್‌ಲೈನ್ ಹಾಜರಾತಿ 'ಪ್ರತ್ಯಕ್ಷ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರ್ಕಾರಿ ಶಾಲಾ ಶಿಕ್ಷಕರ ಆನ್‌ಲೈನ್ ಹಾಜರಾತಿ ಅಗತ್ಯವಿದ್ದು, ಇದೇ ಪ್ರಕ್ರಿಯೆಯನ್ನು ರಾಜ್ಯಾದ್ಯಂತ ಕೈಗೊಳ್ಳಲು ಹಿರಿಯ ಸಚಿವ ಎಚ್.ಕೆ. ಪಾಟೀಲರ ಸಹಕಾರ ಅತ್ಯಗತ್ಯವಿದೆ. ಶಿಕ್ಷಕರ ಫೇಸ್ ರೀಡಿಂಗ್ ಹಾಜರಾತಿ ಪ್ರಕ್ರಿಯೆಯಂತೆ ರಾಜ್ಯದಲ್ಲಿರುವ 57 ಲಕ್ಷ ಶಾಲಾ ಮಕ್ಕಳ ಫೇಸ್ ರೀಡಿಂಗ್ ಹಾಜರಾತಿಗೆ ಇನ್ನೊಂದು ತಿಂಗಳ ಒಳಗಾಗಿ ಅಧಿಕೃತ ಚಾಲನೆ ನೀಡಲು ಸರ್ಕಾರ ಸಿದ್ಧತೆ ನಡೆಸುತ್ತಿದೆ ಎಂದು ಸಚಿವರು ಹೇಳಿದರು. ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಆಯ್ಯ-ವ್ಯಯ ಬಾಷಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಹೇಳಿಕೆಯಂತೆ ರಾಜ್ಯದಲ್ಲಿ ಶಿಕ್ಷಕರು, ಇಲಾಖೆಯ ಸಿಬ್ಬಂದಿಳಿಗೆ ಆನ್‌ಲೈನ್ ಹಾಜರಾತಿಗೆ ಇಂದು ಗದಗನಲ್ಲಿ ಚಾಲನೆ ನೀಡಲಾಗಿದೆ. ಖೊಟ್ಟಿ ಹಾಜರಾತಿಗೆ ಇನ್ನುಮುಂದೆ ಅವಕಾಶ ಇಲ್ಲ ಎಂದು ನುಡಿದರು.



ಜಿಲ್ಲೆಯ ಒಟ್ಟು ಶಿಕ್ಷಕರು, ಸಿಬ್ಬಂದಿಗಳು ಸೇರಿ 4789 ಜನರು ಆನ್‌ಲೈನ್ ಹಾಜರಾತಿ ನೋಂದಣಿ ಮಾಡಿಕೊಂಡಿದ್ದಾರೆ. ಜಿಲ್ಲೆಯ 715 ಶಾಲೆಗಳು, 14 ಕಚೇರಿಗಳು, 253 ಸಿಬ್ಬಂದಿಗಳು ಮತ್ತು ಶಿಕ್ಷಕರಿಂದ ನೋಂದಣಿ ಪ್ರಕ್ರಿಯೆ ಯಶಸ್ವಿಯಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲೂ ಈ ಪ್ರಕ್ರಿಯೆಗೆ ಚಾಲನೆ ಸಿಗಲಿದೆ ಎಂದು ಸಚಿವರು ತಿಳಿದರು.

ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿ.ಪಂ ಸಿಇಒ ಭರತ ಎಸ್, ಶಿಕ್ಷಣ ಇಲಾಖೆ ಅಪರ ಆಯುಕ್ತೆ ಶ್ರೀಮತಿ ಸಿಂತ್ರಿ, ಡಿಡಿಪಿಐ ಆರ್.ಎಸ್. ಬುರಡಿ ಸೇರಿದಂತೆ ಇತರ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

> ಶಿಕ್ಷಕರು ಶಾಲಾ ಆವರಣದ ತಲುಪಿದ ನಂತರ ಮೊಬೈಲ್ ಆ್ಯಪ್ ಮೂಲಕ ಹಾಕಬೇಕಾಗುತ್ತದೆ. ಮನೆಯಲ್ಲಿ ಕುಳಿತು ಹಾಜರಿ ಹಾಕುವ ಅವಕಾಶ ಇಲ್ಲ. ಇದರಿಂದ ಸಮಯಕ್ಕೆ ಸರಿಯಾಗಿ ಶಾಲೆಯಲ್ಲಿ ಶಿಕ್ಷಕರು ಇರುವಂತೆ ಪ್ರಕ್ರಿಯೆ ಆಗುತ್ತಿದೆ. ಇದರಿಂದ ಮಕ್ಕಳ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಶಿಕ್ಷಕರಿಗೆ ಕಾಲಾವಕಾಶ ಸಿಕ್ಕಂತಾಗುತ್ತಿದೆ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

### ಕುಂಬಾರ ಸಮಾಜದ ಸಮುದಾಯ ಭವನಕ್ಕೆ

## ಸಚಿವ ಎಚ್.ಕೆ. ಪಾಟೀಲರಿಂದ ಭೂಮಿ ಪೂಜೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಹಾತಲಗೇರಿ ರಸ್ತೆಯಲ್ಲಿಯ ಕುಂಬಾರ ಸಮಾಜ ಸಮುದಾಯ ಭವನಕ್ಕೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಸೋಮವಾರ ಭೂಮಿ ಪೂಜೆ ನೆರವೇರಿಸಿದರು.



2023-24ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ರೂ 10 ಲಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು ಅವರ ಸ್ಥಳಿಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಅಂದಾಜು 3 ಲಕ್ಷ ರೂ.ಗಳ ಅನುದಾನವನ್ನು ಸಮುದಾಯ ಭವನ ನಿರ್ಮಾಣ ಮಾಡಲು ಮಂಜೂರಿ ಮಾಡಿದ್ದು, ಕಟ್ಟಡ ನಿರ್ಮಾಣಕ್ಕೆ ಸಚಿವರು, ಶಾಸಕರು ಚಾಲನೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಪ್ರಾಸ್ತವಿಕವಾಗಿ ಮಾತನಾಡಿದ ಗದಗ-ಬೆಟಗೇರಿ ಕುಂಬಾರ ಸಮಾಜದ ಅಧ್ಯಕ್ಷ ಶಿವಾನಂದ ಚಕ್ರಸಾಲಿ, ಕುಂಬಾರ ಸಮಾಜದ ಸಮುದಾಯ ಭವನದ ಹಲವು ವರ್ಷಗಳ ಕನಸು ನನಸಾಗಿದ್ದು, ನಮ್ಮ ಸಮಾಜ ತಮಗೆ ಋಣಿಯಾಗಿರುತ್ತದೆ. ನಮ್ಮ ಸಮುದಾಯವು ಆರ್ಥಿಕ, ಶೈಕ್ಷಣಿಕ, ಹಾಗೂ ರಾಜಕೀಯವಾಗಿ ಹಿಂದುಳಿದಿದೆ. ನಮ್ಮ ಸಮುದಾಯಕ್ಕೆ ರಾಜಕೀಯವಾಗಿ ಬಲ ನೀಡುವದರೊಂದಿಗೆ ಆರ್ಥಿಕ ಹಾಗೂ ಶೈಕ್ಷಣಿಕವಾಗಿ ಬೆಂಬಲ ನೀಡಬೇಕು ಎಂದು ವಿನಂತಿಸಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕ್ಬರಸಾಬ್ ಬಬರ್ಚಿ, ಪಂಚ ಗ್ಯಾರಂಟಿ ಸಮಿತಿಯ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ, ಕಾಂಗ್ರೆಸ್ ಮುಖಂಡ ಪ್ರಭು ಬುರಬುರೆ, ವೀರನಗೌಡ ಪಾಟೀಲ, ಮುಖಂಡ ಎಸ್. ಎನ್. ಬಳ್ಳಾರಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಯುವ ಧುರೀಣ ಅಶೋಕ ಮಂದಾಲಿ, ಕುಂಬಾರ ಸಮಾಜದ ಗೌರವಾಧ್ಯಕ್ಷ ವಿಠ್ಠಲ ಕುಂಬಾರ, ಉಪಾಧ್ಯಕ್ಷ ಮುರೆಗೆಪ್ಪ ಕೆರಿಯವರ, ನಿವೃತ್ತ ತೋಟಗಾರಿಕೆ ಹಿರಿಯ ನಿರ್ದೇಶಕ ಸುರೇಶ ಕುಂಬಾರ, ಜಕ್ಕಪ್ಪ ಕುಂಬಾರ, ವೀರೇಶ ಕುಂಬಾರ, ವೀರಪ್ಪ ಕುಂಬಾರ, ಗ್ರಾ.ಪಂ ಸದಸ್ಯ ವೀರಣ್ಣ ಚಕ್ರಸಾಲಿ, ಆಂಜನೇಯು ಕುಂಬಾರ, ಈಶ್ವರಪ್ಪ ಕುಂಬಾರ, ಮಹೇಶ ಕುಂಬಾರ, ಅನಿಲ ಕುಂಬಾರ ಹಾಜರಿದ್ದರು.

### ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ವತಿಯಿಂದ ಶಿಷ್ಯವೇತನ ವಿತರಣೆ ಕಾರ್ಯಕ್ರಮದಲ್ಲಿ ಡಾ.ಯತೀಂದ್ರ ಸಿದ್ದರಾಮಯ್ಯ

# ಸುಶಿಕ್ಷಿತ ವಿದ್ಯಾರ್ಥಿಗಳು ಸಮಾಜದ ಆಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ವಿದ್ಯಾರ್ಥಿಗಳೇ ಮುಂದಿನ ದೇಶದ ಸಂಪತ್ತು. ಮಕ್ಕಳ ಪ್ರತಿಭೆಯನ್ನು ಗುರುತಿಸಿ, ಪ್ರೋತ್ಸಾಹ ನೀಡುತ್ತಿರುವುದು ಸಂತಸದ ಸಂಗತಿ ಎಂದು ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು. ಅವರು ನಗರದ ಕನಕ ಭವನದಲ್ಲಿ ನಡೆದ ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕಾಳಿದಾಸ, ಸಂಗೊಳ್ಳಿ ರಾಯಣ್ಣ ವಿದ್ಯಾರ್ಥಿ ನಿಲಯದ ಹಳೆಯ ವಿದ್ಯಾರ್ಥಿಗಳ ಸಂಘ, ಕರ್ನಾಟಕ ಪ್ರದೇಶ ಕುರುಬರ ಸಂಘ, ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಹಾಗೂ ಕಾಳಿದಾಸ ಶಿಕ್ಷಣ ಸಮಿತಿ ಇವರುಗಳ ಸಂಯುಕ್ತಾಶ್ರಯದಲ್ಲಿ ಸ್ವತಂತ್ರ 'ಅಮೃತ ಮಹೋತ್ಸವ ಮುನ್ನಡೆ' ಯೋಜನೆಯಡಿ ಅಲ್ಪಾವಧಿ ಕೌಶಲ್ಯಾಧಾರಿತ ಕೋರ್ಸ್‌ಗಳ ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ, ಕಿಟ್ ವಿತರಣೆ ಹಾಗೂ ರಾಕೇಶ ಸಿದ್ದರಾಮಯ್ಯ ಶಿಷ್ಯವೇತನ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಉತ್ತಮ ಶಿಕ್ಷಣ ಪಡೆದ ವಿದ್ಯಾರ್ಥಿಗಳು ಸಮಾಜದ ದೊಡ್ಡ ಆಸ್ತಿಯಾಗಿದ್ದು, ಉನ್ನತ ಹುದ್ದೆಯನ್ನು ಪಡೆದು ಸಮಾಜದಲ್ಲಿ ಸೇವೆ ಸಲ್ಲಿಸಬೇಕು. ಮಕ್ಕಳು ಕೇವಲ ಉದ್ಯೋಗ ಪಡೆಯುವ ನಿಟ್ಟಿನಲ್ಲಿ ಕಲಿಯುತ್ತಿದ್ದಾರೆಯೇ ಹೊರತು ಸಮಾಜಸೇವೆ ಮಾಡಬೇಕು ಎಂಬುವ ಬಯಕೆ ಅವರಿಗೆ ಇಲ್ಲ. ಗ್ರಾಮೀಣ ಭಾಗದಲ್ಲಿ ಕಲಿಯುವ ಮಕ್ಕಳು ನಿಮ್ಮ ಹಳ್ಳಿಗಳ ಅಭಿವೃದ್ಧಿಗೆ ಶ್ರಮಿಸಬೇಕು. ಕೇವಲ ಪದವಿ ಗಳಿಸುವುದೇ ಜೀವನವಲ್ಲ, ಅದರಲ್ಲಿ ಮಾನವೀಯ ಮೌಲ್ಯಗಳನ್ನು ಕಲಿತು ಸಮಾಜಕ್ಕೆ ತಾವೆಲ್ಲ ದಾರಿಯಾಗಬೇಕು ಎಂದರು.

ವಿ.ಪ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, 21ನೇ ಶತಮಾನ ಜ್ಞಾನಯುಗವಾಗಿದೆ. ಜ್ಞಾನ ಮತ್ತು ಕೌಶಲ್ಯ ಹೊಂದಿದ ವಿದ್ಯಾರ್ಥಿಗಳಿಗೆ ಉನ್ನತ ಸ್ಥಾನಮಾನ, ಗೌರವ ಸಿಕ್ಕೇ ಸಿಗುತ್ತದೆ. ವಿದ್ಯೆಗಿಂತ ಮಿಗಿಲಾದದ್ದು ಯಾವುದೂ ಇಲ್ಲ. ಶ್ರೀಮಂತಿಕೆ, ಅಧಿಕಾರ ಶಾಶ್ವತವಲ್ಲ. ಆದರೆ, ಶಿಕ್ಷಣ ನಮ್ಮ ಕೊನೆಯವರೆಗೂ ಇರುತ್ತದೆ ಎಂದು ಹೇಳಿದರು.

> ರೋಣ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ಶಿಕ್ಷಣದ ಬಗ್ಗೆ ಹಗಲಿರಳು ಚಿಂತನೆ ನಡೆಸುತ್ತಿದೆ. ಇಂತಹ ಸಂದರ್ಭದಲ್ಲಿ ನಗರದ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತಿರುವುದು ಪ್ರಾಮುಖ್ಯತೆ ಪಡೆದಿದೆ. ಕುರುಬರ ಸಂಘ ಸ್ಥಾಪನೆಯಾದ ನಂತರ ಜಿಲ್ಲೆಯಲ್ಲಿ ಹಲವಾರು ಸಮಾಜಮುಖಿ ಕಾರ್ಯಗಳು ನಡೆಯುತ್ತಿವೆ. ರಾಕೇಶ ಸಿದ್ದರಾಮಯ್ಯ ಅವರ ಸ್ಮರಣೆಯೊಂದಿಗೆ ಶಿಕ್ಷಣ ಸಂಸ್ಥೆಯನ್ನು ಸ್ಥಾಪಿಸಿ ವಿದ್ಯಾರ್ಥಿಗಳಿಗೆ ಶಿಕ್ಷಣವನ್ನು ನೀಡುವ ಮೂಲಕ ಅವರ ಹೆಸರನ್ನು ಅಜರಾಮರಗೊಳಿಸಿದ್ದಾರೆ ಎಂದು ಹೇಳಿದರು.

ಹೆಸ್ಕಾಂ ನಿಗಮದ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ ಮಾತನಾಡಿ, ರಾಕೇಶ್ ಸಿದ್ಧರಾಮಯ್ಯ ಅವರ ಹೆಸರಿನಲ್ಲಿ ಶಿಷ್ಯವೇತನ ನೀಡಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯ. ಇಂದಿನ ದಿನಗಳಲ್ಲಿ ಶಿಕ್ಷಣ ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಭಾರತ ಬಲಿಷ್ಠಗೊಳ್ಳಲು ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡಿ ದೇಶವನ್ನು ಸದೃಢಗೊಳಿಸಬೇಕಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ವೇದಿಕೆ ಮೇಲೆ ಕುರುಬರ ಸಂಘ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರು, ಡಿ. ದೇವರಾಜ ಅರಸು ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ನಟರಾಜ ಜಿ.ಆರ್, ಶಶಿಧರ ರೊಳ್ಳಿ, ಬಸವರಾಜ ಗೊರವರ, ರಾಮಕೃಷ್ಣ ರೊಳ್ಳಿ, ಮಾಜಿ ಶಾಸಕರಾದ ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಕೆ.ಎಚ್. ಪಾಟೀಲ, ಚನ್ನಮ್ಮ ಹುಳಕಣ್ಣವರ, ನೌಕರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳಾರಿ, ರವಿ ಗುಂಜಿಕರ, ಪ್ರಕಾಶ ಕರಿ ಮುಂತಾದವರು ಉಪಸ್ಥಿತರಿದ್ದರು.

# ಸಡಗರದ ಮೊಹರಂ ಆಚರಣೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಭಾನುವಾರ ಮೊಹರಂ ಹಬ್ಬವನ್ನು ಹಿಂದೂ–ಮುಸ್ಲಿಂ ಬಾಂಧವರು ಸೇರಿ ಸಂಭ್ರಮದಿಂದ ಆಚರಿಸಿದರು. ವಿವಿಧೆಡೆ ಸ್ಥಾಪಿಸಿದ ಅಲಾಯಿ ದೇವರನ್ನು ಜನರು ಭಕ್ತಿ ಭಾವದಿಂದ ಆರಾಧಿಸಿದರು. ಕೆಲ ಗ್ರಾಮಗಳಲ್ಲಿ ಮುಸ್ಲಿಂ ಸಮುದಾಯದವರು ಇಲ್ಲದಿದ್ದರೂ ಸಹ ಹಿಂದೂಗಳೇ ಮುಂದಾಳತ್ವ ವಹಿಸಿ ಹಬ್ಬ ಆಚರಿಸಿದರು. ಮುಂಜಾನೆ ಅಲಾಯಿ ದೇವರು ಭೇಟಿ ಕೊಡುವ ವೇಳೆ ಎರಡು ಗುಂಗಾಡಿಯ ಹುಳುಗಳು ಬಂದು ಅಲಾಯಿ ದೇವರ ಸುತ್ತ ಪ್ರದಕ್ಷಿಣೆ ಹಾಕುವ ಮೂಲಕ ಮಾಯವಾಗುತ್ತಿದ್ದು, ಡಂಬಳ ಕೋಟೆಯಿಂದ ಈ ಗುಂಗಾಡಿ ಹುಳುಗಳು ಬರುತ್ತವೆ ಎಂದು ಜನರಲ್ಲಿ ನಂಬಿಕೆ ಇದೆ. ಇಂದಿಗೂ ಆ ಗುಂಗಾಡಿ ಹುಳುಗಳು ಕಾಣಿಸಿಕೊಳ್ಳುತ್ತಿದ್ದು, ಇವುಗಳನ್ನು ನೋಡಿದ ಜನರು ನಮಸ್ಕರಿಸಿ ಸಂತಸದಿಂದ ಚಪ್ಪಾಳೆ ತಟ್ಟುವ ಮೂಲಕ ಹರ್ಷ ವ್ಯಕ್ತಪಡಿಸಿದರು. ಭಾನುವಾರ ಸಂಜೆ ಅಲಾಯಿ ದೇವರ ಮೆರವಣಿಗೆ ಜರುಗಿತು. ಜನರು ಹೂವಿನ ಹಾರ ಹಾಕಿ, ಸಕ್ಕರೆ ನೈವೇದ್ಯ ಸಮರ್ಪಿಸಿ ಭಕ್ತಿ ಮೆರೆದರು. ಅಲಾಯಿ ದೇವರು ಸ್ಥಾಪನೆಯಾದ ದಿನದಿಂದ ಜನರು ಮಸೀದಿಗೆ ಆಗಮಿಸಿ ಹರಕೆ ತೀರಿಸಿದರು. ಅಲಾಯಿ ದೇವರ ವಿಜರ್ಸನೆ ದಿನ ಗ್ರಾಮದ ಯುವಕರ ತಂಡ ವಿವಿಧ ಸಾಂಸ್ಕೃತಿಕ ಜಾನಪದ ಹಾಡುಗಳನ್ನು ಹಾಡುತ್ತಾ ಹಲಗೆ ಮೇಳಕ್ಕೆ ಹೆಜ್ಜೆ ಹಾಕಿದರು. ಅಲಾಯಿ ದೇವರ ಮೆರವಣಿಗೆಗೆ ಸಂದರ್ಭದಲ್ಲಿ ಮುಂಡರಗಿ ಪೊಲೀಸರು ಬಂದೋಬಸ್ತ್ ಒದಗಿಸಿದ್ದರು.



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕನಕಭವನದಲ್ಲಿ ಇತ್ತೀಚೆಗೆ ಜರುಗಿದ ರಾಕೇಶ್ ಸಿದ್ದರಾಮಯ್ಯ ಶಿಷ್ಯ ವೇತನ ವಿತರಣಾ ಸಮಾರಂಭದಲ್ಲಿ ಕಾಂಗ್ರೆಸ್ ಯುವ ನಾಯಕರಾದ ಯತೀಂದ್ರ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ದಲಿತ ಯುವಸೇನಾ ಸಮಿತಿ ಮುಖ್ಯಸ್ಥ ವಿಜಯ ಎಸ್ ಮುಳಗುಂದ, ಕೆ.ಎಂ ಸೈಯದ್, ಸೈಯದ್ ಖಾಲಿದ್ ಕೊಪ್ಪಳ, ಪ್ರಕಾಶ್ ಕರಿ, ವಿನೋದ್ ಶಿದ್ಲಿಂಗ್ ಸೇರಿದಂತೆ ಸಂಘಟನೆಯ ಮುಖ್ಯಸ್ಥರು ಹಾಜರಿದ್ದರು.

**ಜುಲೈ 8ರಂದು ಜಿಲ್ಲಾ ಕಾರಾಗೃಹದಲ್ಲಿ ಬೆಂಗಳೂರಿನ ಮುಂಗಳಮುಖಿಯರಿಂದ ನಾಟಕ ಪ್ರದರ್ಶನದ ನಿಮಿತ್ತ ಲೇಖನ**

# ಮಂಗಳಮುಖಿಯರ ಬದುಕಿನ ತಲ್ಲಣಗಳ ಅನಾವರಣ

ನಟನ ಆಂಗಿಕ ಅಭಿನಯ, ಸಂಭಾಷಣೆ, ವೇಷ– ಭೂಷಣದೊಂದಿಗೆ ಮಾನವನ ನಿತ್ಯ ಬದುಕಿನಲ್ಲಾದ ಭಾವನೆಯನ್ನು ಕಲಾವಿದನ ಅಭಿವ್ಯಕ್ತಿಯನ್ನು ರಂಗಭೂಮಿಯ ಮೂಲಕ ವ್ಯಕ್ತಪಡಿಸುವ ಮಾಧ್ಯಮವೇ ರಂಗಕಲೆ. ಗ್ರೀಕ್‌ನಾಟಕ ಕ್ಷೇತ್ರದಿಂದ ಭಾರತೀಯ ಭಾಷೆಗಳವರೆಗೂ, ನಾಟಕ ಸಾಹಿತ್ಯದ ಕುರಿತು ಅವಲೋಕಿಸಲಾಗಿದೆ. ಭಾರತೀಯ ಭಾಷೆಗಳಲ್ಲಿ ರಂಗಭೂಮಿ ಮತ್ತು ನಾಟಕ ಸಾಹಿತ್ಯದ ದೃಷ್ಟಿಯಿಂದ ಭಾರತೀಯ ನಾಟಕ ಪರಂಪರೆಗೆ ಜಾನಪದವೇ ಆಧಾರವಾಗಿತ್ತೆಂದು ತಿಳಿದುಕೊಳ್ಳಬೇಕು.

ಇಂತಹ ರಂಗ ಕಲೆಯನ್ನು ಬೆಳೆಸಿಕೊಂಡು ಬೆಂಗಳೂರಿನ ಮಂಗಳಮುಖಿ ಸಮುದಾಯ ಅವರ ಬದುಕನ್ನಾದರಿಸಿದ 'ತಲ್ಕಿ' ನಾಟಕವನ್ನು ಪ್ರದರ್ಶಿಸುತ್ತ, ಟ್ರಾನ್ಸ್ ಝುಂಡರ್ ಬದುಕಿನ ರೂಪವನ್ನು ಬಯಲು ಮಾಡುತ್ತ, ಮಾನವರನ್ನು ಮಾನವರಂತೆ ಕಾಣುವ ಜಾಗೃತಿಯನ್ನು ನೀಡುತಿದ್ದಾರೆ.

ಗಂಡು ಅಲ್ಲದ, ಹೆಣ್ಣು ಅಲ್ಲದ, ಬದಕಿನ ನೋವಿನ ನರಕದಲಿ ನುಲಿದು–ನಲಿದು, ತಮ್ಮದೇ ಪರಿವಾರ ಬಂಧನದ ಬದುಕಿಲ್ಲದ, ಸೂರಿಲ್ಲದ, ಸಿರಿಯಿಲ್ಲದ, ಒಲ್ಲದ, ಅಲ್ಲದ, ಬಯಸದ, ಬದುಕಿನಲಿ ನುಲಿದು, ನಲಿದು ಸುಡುಗಾಡು ಬದು–ಕೆಂದರೂ ಸಿರಿ ಸಂಭ್ರಮದಿಂದ ಬದುಕುವ ಮುಂಗಳಮುಖಿಯರ ಬದುಕಿನ ಬವಣೆಯಲಿ ಭಿಕ್ಷೆ ಬೇಡಿ ಬದುಕುವದಷ್ಟೇ ಅಲ್ಲ,



ತಮ್ಮೊಳಗಿನ ಕಲಾ ಕೌಶಲ್ಯದಿಂದ ಮತ್ತೊಂದು ಹೊಸ ಬದುಕನ್ನು ಕಟ್ಟುವದರ ಜೊತೆಗೆ ಹಲವಾರು ಕಲೆಗಳಲ್ಲಿ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಹೊಸ ಬದುಕನ್ನು ಕಟ್ಟುತಿದ್ದಾರೆ.

ಬೆಂಗಳೂರಿನ ಪಯಣ ಸಂಸ್ಥೆಯ ಮಂಗಳಮುಖಿಯರು ತಮ್ಮ ಸಮುದಾಯವನ್ನು ಒಟ್ಟುಗೂಡಿಸಿ ಟ್ರೂಥ್ ಡ್ರೀಮ್ ಯೋಜನೆಯ ತಲ್ಕಿ ಎಂಬ ನಾಟಕವನ್ನು ಸಂಯೋಜಿಸಿ ರಾಜ್ಯದ ತುಂಬ ಪ್ರದರ್ಶಿಸುತ್ತ ಸಮಾಜದ ಜೊತೆ ಬೆರೆತು ಬಾಳುವ ಹಾದಿಯಲ್ಲಿ ಸಾಗುತಿದ್ದಾರೆ. ನರಕದ ಬಾಳನು ಕಂಡುಂಡು, ಹೊಟ್ಟೆ ಹೊರೆಯಲು ಗಟ್ಟಿಯಾಗಿ ಮೆಟ್ಟಿ ನಿಂತು, ಸಾವನು ಸಂಗಾತಿ ಮಾಡಿಕೊಂಡು, ರಾಕ್ಷಸ ಮನುಜರ ಚಿತ್ರಹಿಂಸೆಯ ಸಹಿಸಿ, ಅಲ್ಲದ ಬದುಕಿಗೆ ಬೇಸತ್ತು ತನ್ನೊಳಗಿನ ಸತ್ವವನ್ನು ಪ್ರದರ್ಶಿಸುತ್ತ ಕಸವಾದ ಬದುಕನ್ನು ಹಸನು ಮಾಡಿ, ಹೊಸ ಬದುಕಿನ ಶಕ್ತಿಯಾಗಿ ಹಲವಾರು ಮಂಗಳ ಮುಖಿಯರ ಬದುಕಿನ ಯಶೋಗಾಥೆಯನ್ನು ಕಾಣುತ್ತೇವೆ. ಅಂತಹವರಲ್ಲಿ ಕರ್ನಾಟಕ ಜನಪದ ಅಕಾಡೆಮಿ ಅಧ್ಯಕ್ಷರಾಗಿ ಪದ್ಮಶ್ರೀ ಪ್ರಶಸ್ತಿ ಪಡೆದ ಜೋಗತಿ ಮಂಜಮ್ಮ ನಮಗೆಲ್ಲ ಮಾದರಿ.

ಪಯಣಪಯಣ ಸಂಸ್ಥೆಯು 2009ರಲ್ಲಿ ಸ್ಥಾಪನೆಯಾಗಿದ್ದು, ನೃತ್ಯ ಕಾರ್ಯಕ್ರಮದ ಮೂಲಕ ತೆರವುಗೊಂಡ ಟ್ರುಥ್ ಡ್ರೀಮ್ ಪ್ರಾಜೆಕ್ಟ್‌ನ ಮುಂದಿನ ಭಾಗವಾಗಿ, ತಲ್ಕಿ ನಾಟಕ ರೂಪಗೊಂಡಿದೆ. 55 ವರ್ಷ ದಾಟಿದ ಸಮುದಾಯದ ಸದಸ್ಯರನ್ನು ಒಟ್ಟುಗೂಡಿಸಿ, ಒಂದು ನಾಟಕ ಕಟ್ಟಿ, ಅವರೇ ಅಭಿನಯಿಸಿ, ಈ ನಾಟಕದ ಮೂಲಕ ಅವರ ಕನಸುಗಳು ಮತ್ತೆ ಮತ್ತೆ ನಿಜವಾಗಿಸಬೇಕೆನ್ನುವ ವಿಶೇಷ ಆಶಯಕ್ಕೆ ಶ್ರೀಜಿತ್ ಸುಂದರಂ ಅವರ ನಿರ್ದೇಶನ ಕೈಜೋಡಿಸಿದೆ. ಸಮುದಾಯದ ಹಿರಿಯರನ್ನು ಒಳಗೊಂಡ ನಾಟಕವಾದ್ದರಿಂದ, ಸಮುದಾಯದ ಸುಂದರ ಸಾಂಸ್ಕೃತಿಕ ಚಿತ್ರಣವನ್ನು ಕಟ್ಟಿಕೊಡುವ ಸಾಧ್ಯತೆಯನ್ನು ಕಂಡುಹಿಡಿದು, ಇದನ್ನು ಸಫಲಗೊಳಿಸಲು ನಿರ್ದೇಶಕ ಶ್ರೀಜಿತ್ ಸುಂದರಂ ಅವರ ಸಮುದಾಯದೊಟ್ಟಿಗಿನ ಅಗಾಧ ಅನುಭವ ನೆರವಾಗಿದೆ.

ನಾಟಕದಲ್ಲಿ ಶಾಂತಮ್ಮ, ಲಕ್ಷ್ಮಿಯಮ್ಮ, ರೇವತಿ.ಎ, ಭಾನಮ್ಮ, ಶೋಭನಾ ಕುಮಾರಿ, ಸರವನ, ಚಾಂದಿನಿ ನಿರ್ದೇಶನ – ಶ್ರೀಜಿತ್ ಸುಂದರಂ, ಸಹಾಯಕ ನಿರ್ದೇಶಕಿ–ರೇವತಿ, ನಿರ್ವಹಣೆ –ಚಾಂದಿನಿ, ತ್ರಿಮೂರ್ತಿ, ಸಹ ನಿರ್ದೇಶನ– ರೇವಂತ್ ಆರ್, ಲೈಟಿಂಗ್ ಡಿಸೈನ್– ಏ ವಿಠ್ಠಲ್ (ಅಪ್ಪಯ್ಯ), ವಸ್ತ್ರ ವಿನ್ಯಾಸ– ಶ್ರೀಜಿತ್ ಸುಂದರಂ, ಸಂಕೀರ್ತಿ, ಪೋಸ್ಟರ್ ಡಿಸೈನ್ – ರಫೀಖ್ ಇಸ್ಮಾಯಿಲ್, ಸುಮಿ, ಮೇಕಪ್– ಕೌಶಲ್ಯ ಶಂಕರ್, ಸಂಗೀತ ಸಂಯೋಜನೆ– ಸಂದೀಪ್ ಕುಮಾರ್, ಸಂಗೀತ ನಿರ್ವಹಣೆ– ಮದನ್, ಟೆಕ್ನಿಕಲ್ ಅಸಿಸ್ಟೆಂಟ್– ಅನೀಶ್ ಇವರೆಲ್ಲರ ಕಾರ್ಯ ನಿರ್ವಹಣೆ ನಾಟಕ ಯಶಸ್ವಿಗೆ ಕಾರಣವಾಗಿದೆ.

ರಾಜ್ಯದ ತುಂಬ ಪಯಣ ಸಂಸ್ಥೆ ಆಯೋಜಿಸುವ ತಲ್ಕಿ ನಾಟಕವನ್ನು ಕರ್ನಾಟಕ ಕಾರಾಗೃಹ ಮತ್ತು ಸುಧಾರಣಾ ಸೇವೆಗಳು ಜಿಲ್ಲಾ ಕಾರಾಗೃಹ ಗದಗ, ನಿರ್ಮಲ ವಿವಿಧೋದ್ದೇಶಗಳ ಸೇವಾ ಸಂಸ್ಥೆ ಮುಂಡರಗಿ ಹಾಗೂ ಸೃಷ್ಟಿ ಸಂಕುಲ ಸಂಸ್ಥೆ–ಗದಗ, ನವರಸ ಕಲಾಸಂಘ–ಬೆಟಗೇರಿ ಇವುಗಳ ಸಹಯೋಗದಲ್ಲಿ ಜುಲೈ 8ರಂದು ಜಿಲ್ಲಾ ಕಾರಾಗೃಹ ಗದಗದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮವನ್ನು ಶಹಜಹಾನ ಮುದಕವಿ ಸಹಾಯಕ ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ ಇವರು ಉದ್ಘಾಟಿಸಲಿದ್ದಾರೆ.

ಜಿಲ್ಲಾ ಕಾರಾಗೃಹದ ಅಧೀಕ್ಷಕ ಈರಣ್ಣ ಬ.ರಂಗಾಪುರ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಎ.ಎಸ್. ಮಕಾನದಾರ, ಮಾಲಕ ಚಂದ್ರು ನಾವಿ, ಮಹಾಂತೇಶ ಬೆಕರಿ ಮುಂಡರಗಿ ಭಾಗವಹಿಸಲಿದ್ದಾರೆ. ಪುನೀತ ಪುಣ್ಯಾಶ್ರಮದ ಪಲ್ಲವಿ ಸಿಂಧನೂರ, ಪಯಣ ಸಂಸ್ಥೆಯ ಚಾಂದಿನಿ, ಕಾರಾಗೃಹ ಸಂದರ್ಶಕ ಸಮಿತಿಯ ನಿರ್ಮಲಾ ತರವಾಡೆ, ಸೃಷ್ಟಿ ಸಂಕುಲ ಸಂಸ್ಥೆಯ ಆದಿತ್ಯ ಬಾಂಡಗೆ, ಕಾರಾಗೃಹ ಸಂದರ್ಶಕ ಸಮಿತಿಯ ಸದಸ್ಯರಾದ ಬಸವರಾಜ ನೆಲಜೇರಿ, ಗಣೇಶ ಮೇರವಾಡೆ, ಸವಿತಾ ಇವರು ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಬನ್ನಿ, ನಾಟಕ ನೋಡೋಣ– ಕಲಾವಿದರನ್ನು ಗೌರವಿಸೋಣ

**– ಬಸವರಾಜ ನೆಲಜೇರಿ.**
**ರಂಗ ನಿರ್ದೇಶಕರು, ಗದಗ.**

# ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ವೆಲ್ಫೇರ್ ಪಾರ್ಟಿ ಬೆಂಬಲ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಸರ್ಕಾರ, ರಾಜ್ಯ ಸರ್ಕಾರಗಳ ಕಾರ್ಮಿಕ ವಿರೋಧಿ, ರೈತ ವಿರೋಧಿ ಕಾನೂನುಗಳ ರದ್ದತಿಗೆ ಒತ್ತಾಯಿಸಿ ಜುಲೈ 09ರಂದು ನಡೆಯುವ ಅಖಿಲ ಭಾರತ ಸಾರ್ವತ್ರಿಕ ಮುಷ್ಕರಕ್ಕೆ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಸಂಪೂರ್ಣ ಬೆಂಬಲ ನೀಡಲಿದೆ ಎಂದು ವೆಲ್ಫೇರ್ ಪಾರ್ಟಿ ರಾಜ್ಯ ಅಧ್ಯಕ್ಷರು ಅಡ್ವೋಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ದುಡಿಯುವ ವರ್ಗಗಳ ಕಲ್ಯಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಕಾನೂನುಗಳನ್ನು ಜಾರಿ ಮಾಡದೆ ಕಾರ್ಮಿಕ ವಿರೋಧಿ, ರೈತ ವಿರೋಧಿ, ಜನ ವಿರೋಧಿ ನೀತಿಗಳ ಕಾನೂನು ಜಾರಿ ಮಾಡಿ ದುಡಿಯುವ



ವರ್ಗಗಳ ಜನರನ್ನು ಸಂಕಷ್ಟಕ್ಕೀಡು ಮಾಡುತ್ತಿದ್ದು, ಈ ಕಾನೂನುಗಳ ರದ್ದತಿಗಾಗಿ ಜುಲೈ 9ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ನಡೆಸಲಾಗುತಿದ್ದು, ವೆಲ್ಫೇರ್ ಪಾರ್ಟಿ ಈ ಮುಷ್ಕರಕ್ಕೆ ತನ್ನ ಬೆಂಬಲ ನೀಡಲಿದೆ ಎಂದಿದ್ದಾರೆ.

ಕೇಂದ್ರ ಸರ್ಕಾರ ನಾಲ್ಕು ಹೊಸ ಕಾರ್ಮಿಕ ಕಾನೂನುಗಳನ್ನು ತರಲು ಹೊರಟಿದ್ದು ಈ ಕಾನೂನುಗಳು ಕಾರ್ಮಿಕರ ವಿರೋಧಿಯಾಗಿದ್ದು ಯಾವುದೇ ಕಾರಣಕ್ಕೂ ಇದನ್ನು ಜಾರಿಗೆ ತರಬಾರದು ಎಂದು ಅವರು ಹೇಳಿದ್ದಾರೆ.

ಈ ಬೇಡಿಕೆಗಳಷ್ಟೇ ಅಲ್ಲದೆ ನೂತನ ಶಿಕ್ಷಣ ನೀತಿ, ರಾತ್ರಿ ಪಾಳಿಯಲ್ಲಿ ಮಹಿಳಾ ಕಾರ್ಮಿಕರ ದುಡಿಮೆಗೆ ಅವಕಾಶ, ಕೆಲಸದ ಅವಧಿ 12ಗಂಟೆಗೆ ವಿಸ್ತರಣೆ ಸೇರಿ ವಿವಿಧ ಆದೇಶಗಳನ್ನು ಧಿಕ್ಕರಿಸಿ ದೇಶದ ಎಲ್ಲ ಭಾಗಗಳಲ್ಲಿ ಮುಷ್ಕರ ನಡೆಸಲಾಗುತ್ತಿದೆ. ರಾಜ್ಯಾದ್ಯಂತ ಪಕ್ಷದ ಕಾರ್ಯಕರ್ತರು ಕೂಡ ಮುಷ್ಕರದಲ್ಲಿ ಭಾಗವಹಿಸಲಿದ್ದಾರೆ, ಸಾವಿರಾರು ಸಂಖ್ಯೆಯಲ್ಲಿ ಕಾರ್ಮಿಕರು, ದುಡಿಯುವ ವರ್ಗದವರು, ರೈತರು ಈ ಮುಷ್ಕರದಲ್ಲಿ ಭಾಗವಹಿಸುವ ಮೂಲಕ ಮುಷ್ಕರವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಕರೆ ನೀಡಿದ್ದಾರೆ.



ಗದಗ: ಜವಳಿ ಬಜಾರದಲ್ಲಿರುವ ಭಾವಸಾರ ಕ್ಷತ್ರಿಯ ಸಮಾಜದ ಶ್ರೀವಿಠಲ ಮಂದಿರದಲ್ಲಿ ಆಷಾಢ ಏಕಾದಶಿ ಪ್ರಯುಕ್ತ ಶ್ರೀ ವಿಠಲ ರಖುಮಾಯಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು.

# ವೇತನ ಪಾವತಿಗೆ ನರೇಗಾ ಸಿಬ್ಬಂದಿಗಳ ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ಮಾಡುತ್ತಿರುವ ನರೇಗಾ ಸಿಬ್ಬಂದಿಗಳಿಗೆ ಕಳೆದ 6–7 ತಿಂಗಳ ವೇತನ ವಿಳಂಬವಾಗಿರುವ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರ ತಾಲೂಕಿನ ನರೇಗಾ ಸಿಬ್ಬಂದಿಗಳು ಶನಿವಾರ ತಾ.ಪಂ ಇ.ಓ ಕೃಷ್ಣಪ್ಪ ಧರ್ಮರ ಅವರಿಗೆ ಮನವಿ ಸಲ್ಲಿಸಿದರು.



ಈ ವೇಳೆ ಫಕ್ಕೀರೇಶ ಮತ್ತು ಮಂಜುನಾಥ ತಳವಾರ ಮಾತನಾಡಿ, ತಾಲೂಕಿನಲ್ಲಿ ಜಿ.ಪಂ ಮತ್ತು ತಾ.ಪಂ ಮಟ್ಟದಲ್ಲಿ ವಿವಿಧ ಸ್ಥರಗಳಲ್ಲಿ ನರೇಗಾ ಯೋಜನೆಯಡಿ ವಿವಿಧ ಹುದ್ದೆಗಳಲ್ಲಿ ಹೊರ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದೇವೆ. ಎಲ್ಲ ಸಿಬ್ಬಂದಿಗಳಿಗೆ ಕಳೆದ ಜನವರಿ–2025ರ ಮಾಹೆಯಿಂದ ಇಲ್ಲಿಯವರೆಗೆ ವೇತನ ಪಾವತಿಯಾಗಿಲ್ಲ. ಇದರಿಂದ ಕುಟುಂಬ ನಿರ್ವಹಣೆ ಕಷ್ಟವಾಗುತ್ತಿದೆ. ಬರುವ ತಿಂಗಳಲ್ಲಿ ವೇತನ ಪಾವತಿಯಾಗದೇ ಇದ್ದಲ್ಲಿ ನೌಕರರ ಆರ್ಥಿಕ ಪರಿಸ್ಥಿತಿ ಮತ್ತಷ್ಟು ಕುಸಿಯಲಿದೆ. ಕೂಡಲೇ ಸಿಬ್ಬಂದಿಗಳ ಸಂಬಳಕ್ಕೆ ಕ್ರಮ ತೆಗೆದುಕೊಳ್ಳಬೇಕೆಂದು ಆಗ್ರಹಿಸಿದರು.

ಇನ್ನು ಎರಡು ದಿನಗಳಲ್ಲಿ ವೇತನ ಪಾವತಿಯಾಗದಿದ್ದರೆ ಜುಲೈ 7ರಿಂದ ವೇತನ ಪಾವತಿಯಾಗುವವರೆಗೂ ಅಸಹಕಾರ ಚಳುವಳಿ ಮಾಡಬೇಕೆಂದು ಉಲ್ಲೇಖಿತ ರಾಜ್ಯ ಸಂಘದ ಸಭೆಯಲ್ಲಿ ನಿರ್ಣಯಿಸಲಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಎಸ್.ಕೆ. ಕರನಗೌಡ್ರು, ಎಂ.ಎಚ್. ಪಾಟೀಲ್, ಎಸ್.ಎಸ್. ಪಾಟೀಲ್, ಎಸ್.ವಿ. ಕುಲಕರ್ಣಿ, ಹರೀಶ, ಭಾರತಿ, ಶಿಲ್ಪಾ ಲಮಾಣಿ, ಗಂಗಮ್ಮ ಹರಿಜನ, ಶಿವಕ್ಕ ಮಾದರ, ಪರಮೇಶ ಲಮಾಣಿ, ವಿನೋದಕುಮಾರ ಲಮಾಣಿ, ಗೌರಮ್ಮ ಲಮಾಣಿ, ಭೀಮಪ್ಪ ರಾಠೋಡ ಮಂಜುಳಾ ಕಟ್ಟಿಮನಿ ಇದ್ದರು. ಮನವಿ ಸ್ವೀಕರಿಸಿದ ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಈ ಕುರಿತು ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸುವದಾಗಿ ಹೇಳಿದರು.

# ಶೋಚನೀಯ ಸ್ಥಿತಿಯಲ್ಲಿ ಸಾರ್ವಜನಿಕ ಶೌಚಾಲಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜಿಲ್ಲೆಯ ಪ್ರಮುಖ ವ್ಯಾಪಾರಿ ಕೇಂದ್ರವಾದ ಪಟ್ಟಣದಲ್ಲಿ ಪ್ರತಿಯೊಬ್ಬರ ನಿತ್ಯದ ಅವಶ್ಯಕತೆಗಳಲ್ಲೊಂದಾದ ಶೌಚಾಲಯಗಳ ಸ್ಥಿತಿ ಶೋಚನೀಯವಾಗಿದೆ. ಮುಖ್ಯವಾಗಿ ಮಹಿಳೆಯರು ಶೌಚಕ್ರಿಯೆಗಾಗಿ ಪರದಾಡುವ ಸ್ಥಿತಿಯಂತೂ ಹೇಳತೀರದು.

ಪಟ್ಟಣದ ಶಿಗ್ಲಿ ನಾಕಾದಿಂದ ದೂದಪೀರಾಂ ದರ್ಗಾ 1 ಕಿ.ಮೀ ಅಂತರದಲ್ಲಿ ಇರುವುದು ಪುರಸಭೆಯ ಕಂಪೌಂಡ್ ಗೋಡೆಗೆ ಹೊಂದಿಕೊಂಡಿರುವ ಒಂದು ಶೌಚಾಲಯ ಮಾತ್ರ. ಅದೂ ನಿರ್ವಹಣೆಯ ಕೊರತೆಯಿಂದ ನರಳುತ್ತಿದೆ. ಕಳೆದ 1 ತಿಂಗಳಿಂದ ದುರಸ್ಥಿಗೊಳಗಾಗಿ ಬೀಗ ಹಾಕಲಾಗಿದೆ. ಒಂದು ಕಡೆ ಪುರುಷರಿಗೆ ಮತ್ತೊಂದು ಕಡೆ ಮಹಿಳೆಯರಿಗೆ ವ್ಯವಸ್ಥೆ ಇರುವ ಶೌಚಾಲಯ ಬಂದ್ ಮಾಡಿದರೂ ನಿಸರ್ಗ ಭಾದೆ ತೀರಿಸುವ ಅನಿವಾರ್ಯತೆಯಿಂದ ಶೌಚಾಲಯದ ಬಾಗಿಲ ಮರೆಯಲ್ಲಿಯೇ ಗಲೀಜು ಮಾಡುತ್ತಿರುವುದನ್ನು




ತಪ್ಪಿಸಲು ಒಳ ಹೋಗುವ ದಾರಿಗೆ ಕಲ್ಲು ಮುಳ್ಳಿನ ಕಂಟಿ ಹಾಕಿರುವು ನಿರ್ಲಕ್ಷಕ್ಕೆ ಹಿಡಿದ ಕನ್ನಡಿ.

ಇರುವ ಒಂದು ಶೌಚಾಲಯವೂ ಈ ರೀತಿ ಬಂದ್ ಮಾಡಿರುವ ಪುರಸಭೆಯ ಕ್ರಮಕ್ಕೆ ಮಹಿಳೆಯರು ಹಿಡಿಶಾಪ ಹಾಕುತ್ತಿದ್ದಾರೆ. ನಿತ್ಯ ವ್ಯಾಪಾರ–ವಹಿವಾಟು, ಶಿಕ್ಷಣ, ಉದ್ಯೋಗ, ಆಸ್ಪತ್ರೆ ಹೀಗೆ ಅನೇಕ ಕಾರಣಗಳಿಗಾಗಿ ಸಾವಿರಾರು ಸಂಖ್ಯೆಯಲ್ಲಿ ಜನರು ಬರುತ್ತಾರೆ. ಪುರುಷರು ಹೇಗೋ ನಿಭಾಯಿಸುತ್ತಾರಾದರೂ, ಮಹಿಳೆಯರ ಗೋಳು ಕೇಳುವವರೇ ಇಲ್ಲದಂತಾಗಿದೆ. ಪುರಸಭೆಯ ಬಾಗಿಲಲ್ಲೇ ಇರುವ ಶೌಚಲಾಯಕ್ಕೆ ಮುಳ್ಳು ಹಚ್ಚಿದ್ದರೂ ಪುರಸಭೆಯ ಅಧಿಕಾರಿಗಳಿಗೆ ಕಾಣದಂತಾಗಿದೆ.

ಪುರಸಭೆಯ ಅಧ್ಯಕ್ಷರು ಸೇರಿದಂತೆ ಇರುವ 23 ಸದಸ್ಯರಲ್ಲಿ ಅರ್ಧದಷ್ಟು ಮಹಿಳೆಯರೇ ಇದ್ದು, ಈ ಬಗ್ಗೆ ಗಮನ ಹರಿಸಬೇಕು ಎಂಬುದು ಮಹಿಳೆಯರು ಒತ್ತಾಯಿಸಿದ್ದಾರೆ.

**ಆದ್ರಳ್ಳಿ ಗ್ರಾಮದ ಪ್ರಾಥಮಿಕ ಶಾಲಾ ಕೊಠಡಿಗಳ ಭೂಮಿಪೂಜೆ ನೆರವೇರಿಸಿದ ಶಾಸಕ ಡಾ. ಚಂದ್ರು ಲಮಾಣಿ**

# ಆಯಾ ಗ್ರಾಮಗಳಲ್ಲಿಯೇ ಉತ್ತಮ ಶಿಕ್ಷಣ ಸಿಗಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉತ್ತಮ ಶಿಕ್ಷಣ ಪ್ರತಿಯೊಬ್ಬರಿಗೂ ದೊರಕುವಂತಾಗಬೇಕು. ಗ್ರಾಮೀಣ ಭಾಗದ ಮಕ್ಕಳು ನಗರ ಪ್ರದೇಶಗಳಿಗೆ ಹೋಗಿ ವಿದ್ಯಾಭ್ಯಾಸ ಮಾಡುವ ಬದಲು ಆಯಾ ಗ್ರಾಮದಲ್ಲಿಯೇ ಗುಣಮಟ್ಟದ ಶಿಕ್ಷಣ ಪಡೆಯಬೇಕು ಎನ್ನುವ ಉದ್ದೇಶ ಹೊಂದಲಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಸೋಮವಾರ ಸಮೀಪದ ಆದ್ರಳ್ಳಿ ಗ್ರಾಮದ ಪ್ರಾಥಮಿಕ ಶಾಲಾ ಕೊಠಡಿಗಳ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಆದರಹಳ್ಳಿ ಗ್ರಾಮದ ಪಿಎಂ ಶ್ರೀ ಯೋಜನೆ ಅಡಿಯಲ್ಲಿ ಈಗ ನಾಲ್ಕು ಕೊಠಡಿಗಳಿಗೆ ಭೂಮಿ ಪೂಜೆ ನೆರವೇರಿಸಲಾಗಿದೆ. ಮುಂದಿನ ದಿನಗಳಲ್ಲಿ ಇನ್ನೂ ನಾಲ್ಕು ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಆಗಲಿದೆ. ಗ್ರಾಮದ ಮಕ್ಕಳು ಶಿಕ್ಷಣ ಪಡೆಯುವ ಸಲುವಾಗಿ ಊರನ್ನು ಬಿಟ್ಟು ಬೇರೆ ಹೋಗಬಾರದು ಎಂಬ



ಉದ್ದೇಶದಿಂದ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಆರಂಭಿಸಲಾಗಿದೆ ಎಂದು ತಿಳಿಸಿದರು.

ಬಿಇಒ ಎಚ್.ಎನ್. ನಾಯಕ ಮಾತನಾಡಿ, ಆದರಹಳ್ಳಿ ಗ್ರಾಮದ ಶಾಲೆಯಲ್ಲಿ 600ಕ್ಕೂ ಹೆಚ್ಚು ಮಕ್ಕಳು ಶಿಕ್ಷಣ ಪಡೆಯುತ್ತಿದ್ದು, ಇದು ಇಡೀ ಜಿಲ್ಲೆಯಲ್ಲಿಯೇ ಅತೀ ಹೆಚ್ಚು ಮಕ್ಕಳನ್ನು ಹೊಂದಿರುವ ಸರ್ಕಾರಿ ಶಾಲೆ ಎಂಬ ಕೀರ್ತಿಗೆ ಭಾಜನವಾಗಿದೆ. ಇಂಥ ಶಾಲೆಯ ಸರ್ವಾಂಗೀಣ ಪ್ರಗತಿಗೆ ಎಲ್ಲರೂ ಕೈ ಜೋಡಿಸಬೇಕಾದ ಅಗತ್ಯ ಇದೆ. ಇದು ಊರಿನ ಶಾಲೆ, ಇದನ್ನು ಸ್ವಚ್ಛವಾಗಿ ಇಟ್ಟುಕೊಳ್ಳುವುದು ಗ್ರಾಮಸ್ಥರು ಸಹಕರಿಸುವಂತೆ ಮನವಿ ಮಾಡಿದರು.

ಗ್ರಾ.ಪಂ ಸದಸ್ಯ ಶೇಕಪ್ಪ ಲಮಾಣಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷ ರಮೇಶ ಹೆಗ್ಗಣ್ಣವರ, ಗಣೇಶ ಲಮಾಣಿ, ಅನೂಷಾ ಲಮಾಣಿ, ಚಂದ್ರಕಾಂತ ಲಮಾಣಿ, ಅಕ್ಕವ್ವ ನಾಯಕ, ಶೀಲಾಬಾಯಿ ಲಮಾಣಿ, ತಿಪ್ಪವ್ವ ಲಮಾಣಿ, ಮಹಾಂತೇಶಗೌಡ ಪಾಟೀಲ, ಹಾಲಪ್ಪ ಸೂರಣಗಿ, ಉಮೇಶ ನಾಯಕ, ಜಾನು ಲಮಾಣಿ, ಲೋಕೋಪಯೋಗಿ ಇಲಾಖೆ ಎಇಇ ಫಕ್ಕೀರೇಶ ತಿಮ್ಮಾಪುರ, ಕೆಲವಡಿ, ಪಿಡಿಒ ಡಿ.ಡಿ. ಹಂದಿಗನೂರ, ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಶ್ರೀಕಾಂತ ನಂದೆಣ್ಣವರ, ಪ್ರೌಢಶಾಲೆಯ ಪ್ರಭಾರ ಮುಖ್ಯ ಶಿಕ್ಷಕ ಹರೀಶ ಸೇರಿದಂತೆ ಮತ್ತಿತರರು ಇದ್ದರು.

ಇದೇ ಸಂದರ್ಭದಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಅವರು ಎಲ್‌ಕೆಜಿ ಮತ್ತು ಯುಕೆಜಿ ತರಗತಿ ಮತ್ತು ನೂತನ ಶೌಚಾಲಯಗಳನ್ನು ಉದ್ಘಾಟಿಸಿದರು.

ಶಾಲೆ ಆವರಣದಲ್ಲಿ ಅತಿಕ್ರಮಣ ಮಾಡಿಕೊಂಡಿರುವವರನ್ನು ತೆರವುಗೊಳಿಸಲು ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಮುಂದಾಬೇಕು. ಸರ್ವೆ ಮಾಡಿಸಿ ಅತಿಕ್ರಮಣಗೊಂಡ ಜಾಗೆಯನ್ನು ಶಾಲೆಗೆ ಪಡೆದುಕೊಳ್ಳಬೇಕು. ಈ ಕಾರ್ಯಕ್ಕೆ ಗ್ರಾಮಸ್ಥರ ಸಹಕಾರ ಬಹಳ ಮುಖ್ಯ. ಎಲ್ಲರೂ ಸೇರಿ ಆದರಹಳ್ಳಿ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಮಾಡಲು ಶ್ರಮಿಸೋಣ. ಶಾಲೆಗೆ ಇರುವ ಎಲ್ಲ ಮೂಲ ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಶಾಸಕ ಡಾ. ಚಂದ್ರು ಲಮಾಣಿ ತಿಳಿಸಿದರು.

## ಕವಿ ವಿಭೂಷಣ ಪ್ರಶಸ್ತಿಗೆ ಪವಿತ್ರ ಬಡಿಗೇರ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಜಗಳೂರು

ಪಟ್ಟಣದ ಯುವ ಕವಯತ್ರಿ ಪವಿತ್ರ ಬಡಿಗೇರ್ ಅವರು ರಾಜ್ಯಮಟ್ಟದ " ಕವಿ ವಿಭೂಷಣ ಪ್ರಶಸ್ತಿ" ಗೆ ಆಯ್ಕೆಯಾಗಿದ್ದಾರೆ. ಇದೇ ಜುಲೈ 27 ರಂದು ನಡೆಯುವ ಕವಿತ ಕರ್ಮಣಿ ಫೌಂಡೇಶನ್ ನಾಗರ ಮುನ್ನೋಳಿ ಉದ್ಘಾಟನಾ ಸಮಾರಂಭದಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಯುವ ಕವಯಿತ್ರಿ ಪವಿತ್ರ ಬಡಿಗೇರ್ ಅವರಿಗೆ ಈ ರಾಜ್ಯಮಟ್ಟದ ಕವಿ ವಿಭೂಷಣ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಚಿಕ್ಕೋಡಿ ನಾಗರ ಮುನ್ನೋಳಿ ಕವಿತ್ತ ಕರ್ಮಮಣಿ ಫೌಂಡೇಶನ್(ರಿ) ಅಧ್ಯಕ್ಷ ಲಾಲ್‌ಸಾಬ್ ಎಚ್ ಪೆಂಡಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪರಿಚಯ:** ಪವಿತ್ರ ಬಡಿಗೇರ್ ಅವರ ಹುಟ್ಟೂರು ಹರಪನಹಳ್ಳಿ ತಾಲೂಕಿನ ಕಡಬಗೆರೆ. ಚಿಕ್ಕವರಿದ್ದಾಗಿನಿಂದಲೂ ಕಲೆ ಮತ್ತು ಸಾಹಿತ್ಯದಲ್ಲಿ ಆಸಕ್ತಿ ಹೊಂದಿದ್ದರು, ವೈವಾಹಿಕ ಜೀವನದ ನಂತರ ದಾವಣಗೆರೆ ಜಿಲ್ಲೆಯ ಜಗಳೂರಿನಲ್ಲಿ ವಾಸವಾಗಿರುವ ಇವರು ಕಳೆದ ಐದಾರು ವರ್ಷಗಳಿಂದ ವಿದ್ಯಾಭ್ಯಾಸದ ಜೊತೆಗೆ ಸಾಹಿತ್ಯ ಕ್ಷೇತ್ರದಲ್ಲಿ ಅನೇಕ ಕವನಗಳನ್ನು ಹಾಗೂ ಅಧುನಿಕ ವಚನಗಳನ್ನು, ಗಜಲ್ ಗಳನ್ನು ರಚಿಸಿದ್ದಾರೆ. ಈಗಾಗಲೇ ಪವಿತ್ರ ಬಡಿಗೇರ್ ಅವರಿಗೆ 2021 ರಲ್ಲಿ ನವಜ್ಯೋತಿ ಸಾಂಸ್ಕೃತಿಕ ಸೇವಾ ಸಂಸ್ಥೆಯು ವಿಶ್ವ ಮಹಿಳಾ ದಿನಾಚರಣೆಯಂದು ಆಯೋಜಿಸಿದ್ದ ವಿಜಯ ನಗರ ಜಿಲ್ಲೆಯ ಪ್ರಥಮ ಕವಿಗೋಷ್ಠಿಯಲ್ಲಿ ಭಾಗವಹಿಸಿದ್ದಕ್ಕಾಗಿ ಇವರಿಗೆ " ಕಾವ್ಯ ಜ್ಯೋತಿ " ಎಂಬ ಬಿರುದು ನೀಡಿ ಸನ್ಮಾನಿಸಿದ್ದಾರೆ. ಸಿದ್ದೇಶ್ವರ ಸಾಹಿತ್ಯ ವೇದಿಕೆಯು ಚಿತ್ರದುರ್ಗ , ಕಲಾಕುಂಚ* ಸಂಸ್ಥೆಯಿಂದ ಆಯೋಜಿಸಿದ್ದ ರಾಷ್ಟ್ರೀಯ ಮಟ್ಟದ ಕವಿಗೋಷ್ಠಿ, ವಿಶ್ವ ಬಂಜಾರ ಕಲಾ ಸಾಹಿತ್ಯಿಕ ಸಂಘ ಅಮೀನಗಡ ಇತ್ಯಾದಿ ವೇದಿಕೆಗಳಲ್ಲಿ ಆಯೋಜಿಸಿದ್ದ ಅಂತರ್ಜಾಲ ಕವಿಗೋಷ್ಠಿಗಳಲ್ಲಿ ಭಾಗವಹಿಸಿ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

### ಸಾಗುವಳಿ ಜಮೀನುಗಳನ್ನು ಸಕ್ರಮಗೊಳಿಸುವಂತೆ ಆಗ್ರಹಿಸಿ ತಹಸೀಲ್ದಾರರಿಗೆ ಮನವಿ

# ಹಕ್ಕುಪತ್ರ ನೀಡದಿದ್ದರೆ ಸಾಮೂಹಿಕ ಆತ್ಮಹತ್ಯೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಯಲ್ಲಾಪೂರ ತಾಂಡಾದ ಬಡ ರೈತರು ಗುಡಗೇರಿ ಸಂಸ್ಥಾನದ ಕಾಲದಿಂದಲೂ ಸಾಗುವಳಿ, ಉಳುಮೆ ಮಾಡಿಕೊಂಡು ಬಂದಿರುವ ಜಮೀನುಗಳನ್ನು ಸಕ್ರಮಗೊಳಿಸಿ ಮಾಲೀಕತ್ವದ ಹಕ್ಕನ್ನು ನೀಡಬೇಕೆಂದು ಕರ್ನಾಟಕ ಪ್ರದೇಶ ಲಂಬಾಣಿ ಬಂಜಾರ ಶ್ರೀ ಸೇವಾಲಾಲ ಕಲ್ಯಾಣ ಸಂಘದ ಜಿಲ್ಲಾ ಅಧ್ಯಕ್ಷ ರವಿಕಾಂತ ಅಂಗಡಿ, ತಾಲೂಕಾಧ್ಯಕ್ಷ ದೀಪಕ ಲಮಾಣಿ ಆಗ್ರಹಿಸಿದರು.

ಅವರು ತಾಲೂಕಿನ ಯಲ್ಲಾಪೂರ ತಾಂಡಾದ ಜನರು ಉಳುಮೆ ಮಾಡಿಕೊಂಡು ಬರುತ್ತಿರುವ ಜಮೀನುಗಳನ್ನು ಸಕ್ರಮಗೊಳಿಸುವಂತೆ ಆಗ್ರಹಿಸಿ ತಹಸೀಲ್ದಾರ ಧನಂಜಯ ಅವರಿಗೆ ಮನವಿ ನೀಡಿ ಮಾತನಾಡಿದರು.

ತಾಲೂಕಿನ ವ್ಯಾಪ್ತಿಗೆ ಒಳಪಡುವ ಯಲ್ಲಾಪೂರ ತಾಂಡಾದ ಕಡುಬಡವರು ಯಾವುದೇ ಮೂಲಸೌಲಭ್ಯಗಳಿಲ್ಲದೇ ಗುಡ್ಡಗಾಡು ಪ್ರದೇಶದಲ್ಲಿ ವಾಸಿಸುತ್ತಿರುವ ಬುಡಕಟ್ಟು ಜನಾಂಗಕ್ಕೆ ಸೇರಿದವರಾಗಿದ್ದಾರೆ. ಬಾಲೇಹೊಸೂರ ಗ್ರಾಮದ ಸರಹದ್ದಿನಲ್ಲಿನ ಗಾಯರಾಣಾವ ಹುಲ್ಲುಗಾಡಿನ



ಗೋಮಾಳಗಳಲ್ಲಿನ ರಿ.ಸ.ನಂ.364ರಿಂದ 416ರವರೆಗಿನ ಸರ್ವೆ ನಂಬರಿನಲ್ಲಿ ತಮ್ಮ ಕೃಷಿ ಉಪಜೀವನಕ್ಕಾಗಿ ಸರಿಸಮಾರು 1941-42ನೇ ಸಾಲಿನ ಗುಡಗೇರಿ ಸಂಸ್ಥಾನದ ಕಾಲದಿಂದಲೂ ಸಾಗುವಳಿ, ಉಳುಮೆ ಮಾಡಿಕೊಂಡು ಬಂದಿದ್ದಾರೆ.

ಇವೇ ಕೃಷಿ ಭೂಮಿಯಲ್ಲಿ ಸಾಗುವಳಿ ಮಾಡಿ ಅದರಲ್ಲಿ ಬಂದ ಫಸಲಿನಿಂದ ಜೀವನೋಪಾಯವನ್ನು ನಡೆಸುತ್ತಾ ಬಂದಿದ್ದಾರೆ. ಸರ್ವೋಚ್ಚ ನ್ಯಾಯಾಲಯವು ನಮ್ಮಂತಹ ಗುಡ್ಡಗಾಡು ಪ್ರದೇಶ ಮತ್ತು ಅರಣ್ಯವನ್ನು ಅವಲಂಬಿತ ಬುಡಕಟ್ಟು, ಅಲೆಮಾರಿ, ಅರಣ್ಯವಾಸಿ, ಗುಡ್ಡಗಾಡು ಪ್ರದೇಶಗಳಲ್ಲಿ, ಅರಣ್ಯ ಅವಲಂಬಿತ ಜನಾಂಗಗಳಿಗೆ ಕೃಷಿಯ ಉದ್ದೇಶಕ್ಕಾಗಿ ಸಾಗುವಳಿ ಮಾಡಿದ ಅರಣ್ಯ ಪ್ರದೇಶದ ಆಸ್ತಿ ಹಕ್ಕು ಪತ್ರ ಕೊಡಲು ಆದೇಶಿಸಿದ್ದು, ಸಾಗುವಳಿ ಮಾಡಿ ಜೀವನೋಪಾಯ ಮಾಡುತ್ತಿರುವ ಎಲ್ಲರೂ ತಮ್ಮ ಸಂಪೂರ್ಣ ಸಾಗುವಳಿ ಮಾಡಿರುವ ಜಮೀನುಗಳನ್ನು ಸರ್ವೇಯರ್‌ರವರಿಂದ ಅಳತೆ ಮಾಡಿಸಿ, ಜಿಲ್ಲಾಧಿಕಾರಿಗಳ ಮುಖಾಂತರ ಅರಣ್ಯ ಹಕ್ಕು ಸಮಿತಿಯಲ್ಲಿ ನಮ್ಮ ಅರ್ಜಿಗಳನ್ನು ಕಳುಹಿಸದೇ ಯಾವುದೇ ಬಲವಾದ ಕಾರಣಗಳಿಲ್ಲದೇ ಲಕ್ಷೇಶ್ವರ ತಾಲೂಕಾ ದಂಡಾಧಿಕಾರಿಗಳು ನಮ್ಮ ಅರ್ಜಿಗಳನ್ನು ತಿರಸ್ಕರಿಸಿದ್ದು ನೂರಾರು ಕುಟುಂಬಗಳಿಗೆ ಬರಸಿಡಿಲು ಬಡಿದಂತಾಗಿದೆ ಎಂದು ಹೇಳಿದರು.

ಇಲ್ಲಿರುವ ಜನರಿಗೆ ಕೃಷಿಯನ್ನು ಹೊರತುಪಡಿಸಿ ಬೇರೆ ಯಾವ ಉದ್ಯೋಗವೂ ಬರುವುದಿಲ್ಲ. ಒಂದು ವೇಳೆ ನಮಗೆ ಸದರ ಜಮೀನಿನಿಂದ ಒಕ್ಕಲೆಬ್ಬಿಸಿ

> ಗದಗ ಜಿಲ್ಲೆಯ ಇತರೆ ತಾಲೂಕುಗಳಲ್ಲಿಯೂ ಕೂಡಾ ಅನೇಕ ಸಾಗುವಳಿದಾರರಿಗೆ ಹಕ್ಕು ಪತ್ರ ನೀಡಲಾಗಿದೆ. ಆದರೆ ಹತ್ತಾರು ದಶಕಗಳಿಂದ ಸದರ ಭೂಮಿಯ ಮೇಲೆ ಅವಲಂಬಿತರಾದ ನಮಗೆ ಹಕ್ಕು ಪತ್ರ ನೀಡದೇ ಉದ್ದೇಶಪೂರ್ವಕವಾಗಿ ನಮ್ಮನ್ನು ಒಕ್ಕಲೆಬ್ಬಿಸುವ ಕೆಲಸ ಮಾಡುತ್ತಿರುವುದು ವಿಷಾದನೀಯ ಎಂದು ರವಿಕಾಂತ ಅಂಗಡಿ ಆರೋಪಿಸಿದರು.

ಸಾಗುವಳಿ ಜಮೀನನ್ನು ಸಕ್ರಮಗೊಳಿಸಿ ನಮಗೆ ಹಕ್ಕು ಪತ್ರವನ್ನು ನೀಡದಿದ್ದರೆ ನಾವು ಸಾಮೂಹಿಕ ಆತ್ಮಹತ್ಯೆ ಮಾಡಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ ಧನಂಜಯ, ಈ ಕುರಿತು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವದಾಗಿ ಹೇಳಿದರು. ಈ ಸಂದರ್ಭದಲ್ಲಿ ಶೇಖಪ್ಪ ಲಮಾಣಿ (ಅಕ್ಕಿಗುಂದ), ಗಣೇಶ ಲಮಾಣಿ, ಸೋಮಣ್ಣ ಲಮಾಣಿ, ಮಹಾದೇವಪ್ಪ ಲಮಾಣಿ, ಚನ್ನಪ್ಪ ಲಮಾಣಿ, ತಿಪ್ಪಣ್ಣ ಲಮಾಣಿ, ಶೇಖಪ್ಪ ಲಮಾಣಿ, ಕೃಷ್ಣ ಲಮಾಣಿ, ಬಾವಣವ್ವ ಲಮಾಣಿ, ಗಂಗವ್ವ ಲಮಾಣಿ, ಶಾಂತವ್ವ ಲಮಾಣಿ ಸೇರಿದಂತೆ ನೂರಾರು ಜನರಿದ್ದರು.

## ಉಚಿತ ಸೂರ್ಯಕಾಂತಿ ಬೀಜ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದ ಶ್ರೀ ಕರಿಯಮ್ಮ ದೇವಿ ಸಮುದಾಯ ಭವನದಲ್ಲಿ ಕೃಷಿ ಇಲಾಖೆ ಗದಗ ಸಹಯೋಗದಲ್ಲಿ 2025-26ನೇ ಸಾಲಿನ ರಾಷ್ಟ್ರೀಯ ಆಹಾರ ಭದ್ರತಾ ಮಿಷನ್ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆಯಡಿ ಸೂರ್ಯಕಾಂತಿ ಬೀಜ ವಿತರಣೆ ಹಾಗೂ ಕೃಷಿ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಗದಗ ಜಿಲ್ಲಾ ಕೃಷಿ ಇಲಾಖೆಯ ಉಪ ನಿರ್ದೇಶಕರಾದ ಸ್ಫೂರ್ತಿ ಜಿ.ಎಸ್ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಪ್ರಸ್ತುತ ಮಳೆ ಕೊರತೆ ಆವರಿಸಿ ಮುಂಗಾರು ಬೆಳೆಗಳು ಒಣಗುತ್ತಿದ್ದು, ರೈತರು ಹತಾಶೆಗೆ ಒಳಗಾಗಬಾರದು ಎಂದು ರೈತರಿಗೆ ಕೃಷಿ ಇಲಾಖೆಯಿಂದ ಉಚಿತವಾಗಿ ಸೂರ್ಯಕಾಂತಿ ಬೀಜಗಳನ್ನು ವಿತರಿಸಲಾಗಿದೆ. ರೈತರು ಪರ್ಯಾಯ ಬೆಳೆ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು, ಮಣ್ಣು ಮತ್ತು ನೀರು ಸಂರಕ್ಷಣೆ, ತೇವಾಂಶ ನಿರ್ವಹಣೆಗೆ, ಹಸಿರೆಲೆ ಗೊಬ್ಬರ ಹಾಗೂ ಕೊಟ್ಟಿಗೆ ಗೊಬ್ಬರ ಬಳಕೆ ಮಾಡಬೇಕು ಎಂದರು.

ನಮ್ಮಲ್ಲಿ ನೀರಾವರಿ ಸೌಲಭ್ಯ ಪಡೆಯಲು ಸ್ಪಿಂಕ್ಲರ್ ಪೈಪ್, ಇಂಜಿನ್, ಬಿತ್ತನೆಗೆ ಕುರಿಗಿ ಕುಂಟೆ ರಾಶಿ ಮಾಡುವ ಯಂತ್ರಗಳನ್ನು ಹಾಗೂ ಕೀಟನಾಶಕಗಳನ್ನು ಸಬ್ಸಿಡಿ ದರದಲ್ಲಿ ವಿತರಣೆ ಮಾಡಲಾಗುತ್ತದೆ. ಇದರ ಸದುಪಯೋಗ ಪಡೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ರೈತ ಸಂಪರ್ಕ ಕೇಂದ್ರದ ಅಧಿಕಾರಿ ಬಸವ ರಾಜೇಶ್ವರಿ ಸಜ್ಜನರ, ಸಹಾಯಕ ಕೃಷಿ ಅಧಿಕಾರಿ ರಮೇಶ ಜತ್ತಿ, ಕೃಷ್ಣಾರೆಡ್ಡಿ ಮೇಟಿ, ಸುಶ್ಮಿತಾ, ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ಬಾಳಪ್ಪ ಗಂಗರಾತ್ರಿ, ಶರಣಪ್ಪ ಜೋಗಿನ, ಮಲ್ಲಿಕಾರ್ಜುನ್ ಇದ್ಲಿ, ಭೀಮಪ್ಪ ರಾಮಜಿ ಮುಂತಾದವರಿದ್ದರು.

### 'ಸೋರುತಿಹುದು ಸಂಬಂಧ' ನಾಟಕ ಪ್ರದರ್ಶನ ಉದ್ಘಾಟಿಸಿದ ತೋಂಟದ ಸಿದ್ಧರಾಮಶ್ರೀಗಳು

# ಸಾಮಾಜಿಕ ಸ್ವಾಸ್ಥ್ಯಕ್ಕೆ ನಾಟಕಗಳು ಪರಿಣಾಮಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ನಾಟಕ ನವರಸಗಳಿಂದ ಕೂಡಿದ್ದು, ಸಾಹಿತ್ಯದ ಪ್ರಕಾರದಲ್ಲಿಯೇ ಶ್ರೇಷ್ಠವಾದುದು. ನಾಟಕಗಳಿಗೆ ಪ್ರಾಚೀನ ಕಾಲದಿಂದಲೂ ಮನ್ನಣೆ ಇದೆ. ಮನರಂಜನೆ ಜೊತೆಗೆ ಸಂದೇಶವನ್ನು ಹೊಂದಿ ವ್ಯಕ್ತಿಯ ಉನ್ನತಿಗೆ ಮತ್ತು ಸಾಮಾಜಿಕ ಸ್ವಾಸ್ಥ್ಯಕ್ಕೆ ಸಹಕಾರಿಯಾಗಿವೆ ಎಂದು ತೋಂಟದಾರ್ಯಮಠದ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ತೋಂಟದಾರ್ಯ ಕಲಾರಂಗದ ಸಹಯೋಗದಲ್ಲಿ ಗದುಗಿನ ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಜರುಗಿದ ನಾಟಕ ಪ್ರದರ್ಶನವನ್ನು ಉದ್ಘಾಟಿಸಿ ಶ್ರೀಗಳು ಮಾತನಾಡಿದರು.

ಆಧುನಿಕತೆಯ ಭರದಲ್ಲಿ ಹೆಣ್ಣು, ಹೊನ್ನು, ಮಣ್ಣಿನ ವ್ಯಾಮೋಹಗಳಿಗೆ ಒಳಗಾಗುವ ಮನುಷ್ಯ, ತನ್ನೊಳಗಿನ ಮನುಷ್ಯತ್ವವನ್ನು



ಮರೆತು, ಸಂಬಂಧಗಳಿಗೆ ಸ್ಪಂದಿಸದೆ ತನ್ನ ಯಾಂತ್ರಿಕ ಬದುಕನ್ನು ಮುಂದುವರೆಸುತ್ತಿದ್ದಾನೆ. ಹಿರಿಯ ನಾಗರಿಕರ ಬದುಕು ಇಂದು ದುರ್ಭರವಾಗಿದೆ. ಯುವಜನರ ಮನಸ್ಥಿತಿ ಬದಲಾವಣೆಗೆ ಇಂತಹ ನಾಟಕಗಳು ಪರಿಣಾಮಕಾರಿ ಎಂದು ತಿಳಿಸಿದರು.

ವೇದಿಕೆ ಮೇಲೆ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಂ.ಸಿ. ವಗ್ಗಿ, ಡಾ. ಉಮೇಶ ಪುರದ, ಸಿ.ಕೆ.ಎಚ್. ಕಡಣಿ ಶಾಸ್ತ್ರೀ, ಅನ್ನದಾನಿ ಹಿರೇಮಠ ಉಪಸ್ಥಿತರಿದ್ದರು. ಕಾರ್ಯದರ್ಶಿ ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಕೋಶಾಧ್ಯಕ್ಷ ಡಿ.ಎಸ್. ಬಾಪುರಿ ವಂದಿಸಿದರು. ಧಾತ್ರಿ ರಂಗಸಂಸ್ಥೆ ಸಿರಿಗೇರಿ ಇವರು ಪ್ರಸ್ತುತ ಪಡಿಸಿದ 'ಸೋರುತಿಹುದು ಸಂಬಂಧ' ಎಂಬ ನಾಟಕ ನೋಡುಗರ ಮನವನ್ನು ಕಲಕಿತು.

> ಅಧ್ಯಕ್ಷತೆ ವಹಿಸಿದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಕನ್ನಡ ರಂಗಭೂಮಿಗೆ ಗದುಗಿನ ಕೊಡುಗೆ ಅಪಾರವಾಗಿದೆ. ಅಂಗೈಯಲ್ಲಿ ಮನರಂಜನೆ ದೊರೆಯುವ ಈ ಸಂದರ್ಭದಲ್ಲಿ ನಮ್ಮ ಪರಂಪರೆಯನ್ನು ಮರೆತರೆ ನಮ್ಮನ್ನು ನಾವೇ ಮರೆತಂತೆ. ಸಾಹಿತ್ಯ, ಸಂಗೀತ, ಕಲೆ ಮನುಷ್ಯರನ್ನಾಗಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತವೆ. ಸಾರ್ವಜನಿಕರ ಸಹಕಾರ ಮತ್ತು ಸಹಭಾಗಿತ್ವ ಇವುಗಳ ಅಭಿವೃದ್ಧಿಗೆ ಮುಖ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಂದಾನಪ್ಪ ವಿಭೂತಿ, ಡಾ. ಅನಂತ ಶಿವಪೂರ, ಡಾ. ವಾಣಿ ಶಿವಪೂರ, ಐ.ಕೆ. ಕಮ್ಮಾರ, ಎಸ್.ಎಸ್. ಕಳಸಾಪೂರಶೆಟ್ಟರ, ರತ್ನಕ್ಕ ಪಾಟೀಲ, ಜಯದೇವ ಭಟ್, ಬಿ.ಬಿ. ಪಾಟೀಲ, ರಾಜಶೇಖರ ಕರಡಿ, ವಿ.ಎಸ್. ದಲಾಲಿ, ಮಲ್ಲಪ್ಪ ಡೊಣಿ, ಆರ್.ಟಿ. ನಾರಾಯಣಪೂರ, ಯಲ್ಲಪ್ಪ ಹಂದ್ರಾಳ, ಆರ್.ಜಿ. ಹಾಸಲಕರ, ಬಿ.ಎಲ್. ಚವ್ಹಾಣ, ಗುರುಪಾದ ಕಟ್ಟಿಮನಿ, ಎಸ್.ಎಂ. ಕಾತರಕಿ, ಭಾಗ್ಯಶ್ರೀ ಹುರಕಡ್ಲಿ, ಪಾರ್ವತಿ ಬೇವಿನಮರದ, ಶೈಲಜಾ ಗಿಡ್ನಂದಿ, ಶಾಂತಾ ಗಣಪ್ಪನವರ, ಎಸ್.ಸಿ. ಹುಯಿಲಗೋಳ, ಅಶೋಕ ಹಾದಿ, ಸತೀಶ ಚನ್ನಪ್ಪಗೌಡ್ರ, ವಿ.ಎನ್. ಬೇಂದ್ರೆ, ಅಮೃತೇಶ ಹೊಸಳ್ಳಿ, ಶಶಿಕಾಂತ ಕೊರ್ಲಹಳ್ಳಿ, ಬಸವರಾಜ ಗಣಪ್ಪನವರ, ಎಲ್. ತಿಪ್ಪಾನಾಯ್ಕ, ಐ.ಎಚ್. ಹಳ್ಯಾಳ ಮೊದಲಾದವರು ಭಾಗವಹಿಸಿದ್ದರು.

## ಗುರುಗಳ, ತಂದೆ-ತಾಯಿಗಳ ಋಣ ತೀರಿಸುವ ಕಾರ್ಯವಾಗಲಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಗುರುಗಳು ಹಾಗೂ ಪಿತೃವಿನ ಋಣವನ್ನು ಸಾಧ್ಯವಷ್ಟು ತೀರಿಸುವ ಕಾರ್ಯ ಮಾಡಬೇಕು, ಇದರಿಂದ ಉತ್ತರೋತ್ತರ ಸಾರ್ಥಕತೆಯನ್ನು ಸಂಭ್ರಮಿಸಬಹುದು ಎಂದು ನಿವೃತ್ತ ಮುಖ್ಯ ಶಿಕ್ಷಕ ಸಿ ಸಿದ್ದಪ್ಪ ತಿಳಿಸದರು.

ತಾಲೂಕಿನ ಬಾಗಳಿ ಗ್ರಾಮದ ರಾಮನಗೌಡ್ರು ಹಾಲಮ್ಮ ಚನ್ನನ ಗೌಡ್ರು ಪ್ರೌಢಶಾಲೆಯಲ್ಲಿ ಸೋಮವಾರ ನಡೆದ 2001-02 ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿಧ್ಯಾರ್ಥಿಗಳ ಸ್ನೇಹ ಸಮ್ಮಿಲನ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ವಿಧ್ಯಾಭ್ಯಾಸ ಮುಗಿದ ನಂತರವು ವಿದ್ಯಾರ್ಥಿಗಳು ತಾವು ಶಿಕ್ಷಣ ಪಡೆದ ಪ್ರೌಢ ಶಾಲಾ ಗುರುಗಳನ್ನು ನೆನಪಿನಲ್ಲಿ ಇಟ್ಟುಕೊಂಡಿದ್ದೀರಿ ಎಂದರೆ ಇದು ಮಾದರಿ ಕಾರ್ಯವಾಗಿದೆ, ಇಂದಿನ ಮಕ್ಕಳಿಗೆ ಸಂಸ್ಕಾರದ ಕೊರತೆಯಿದೆ, ಇಂದಿನ ಶಿಕ್ಷಣ



ಪದ್ಧತಿಯೂ ಸಾಕಷ್ಟು ಬದಲಾಗಿದೆ ಮಕ್ಕಳಿಗೆ ದಂಡಿಸದೆ, ಶಿಕ್ಷಿಸದೆ ಪಾಠ ಮಾಡಬೇಕು ಎಂದು ಪಾಲಕರೆ ತಾಕೀತು ಮಾಡುತ್ತಾರೆ.

ನಾವು ನಿಮಗೆಲ್ಲ ಹೊಡೆದು ಬಡಿದು ಪಾಠ ಭೋದನೆ ಮಾಡಿರುವುದರಿಂದ ಸಮಾಜದಲ್ಲಿ ಸಂಸ್ಕಾರ ಜೀವನ ಕಟ್ಟಿಕೊಂಡಿದ್ದೀರಿ ಹಲವಾರು ವರ್ಷಗಳ ನಂತರ ನಿಮ್ಮನ್ನು ಮತ್ತೆ ನೋಡಿದ್ದು ಸಂತೋಷ ನೀಡಿತು ಎಂದರು.

ನಿವೃತ್ತ ಹಿಂದಿ ಶಿಕ್ಷಕ ವೀರೇಶಪ್ಪ ಡಿ ಕೆ ಮಾತನಾಡಿ. ನಮ್ಮ ಶಿಕ್ಷಕ ವೃತ್ತಿಯು ಅತ್ಯಂತ ಪವಿತ್ರವಾದದ್ದು, ಅದರಂತಯೆ ನಾವುಗಳು ಉತ್ತಮ ರೀತಿಯಲ್ಲಿ ಮಕ್ಕಳಿಗೆ ಪಾಠ ಭೋದನೆ ಮಾಡಿದಾಗ ನಮ್ಮ ಹೆಸರು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಆಳವಾಗಿ ಬೇರೂರಲು ಸಾಧ್ಯವಾಗುತ್ತದೆ. ಕೇವಲ ಪ್ರತಿಭಾನ್ವಿತ ಹಾಗೂ ಕಲಿಕೆಯಲ್ಲಿ ಮುಂದಿರುವ ಮಕ್ಕಳಿಗೆ ಪಾಠ ಭೋದನೆಗೆ ಹೆಚ್ಚು ಹೊತ್ತು ನೀಡದೆ, ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಸರಳವಾಗಿ ಅವರದೇ ಆದ ಭಾಷೆಯಲ್ಲಿ ಪಾಠ ಭೋದನೆ ಮಾಡಿದರೆ ಸುಲಭವಾಗಿ ಅರ್ಥೈಸಿಕೊಂಡು ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ. ಎರಡು ದಶಕಗಳ ಹಿಂದಿನ ಶಿಕ್ಷಣಕ್ಕೂ ಅಜಗಜಾಂತರ ವ್ಯತ್ಯಾಸವನ್ನು ಕಾಣಬಹುದಾಗಿದೆ, ಅಂದು ಮಕ್ಕಳಿಗೆ ಯಾವುದೇ ರೀತಿಯ ಸರ್ಕಾರಿ ಸೌಲಭ್ಯಗಳಿಲ್ಲದೆ ತಮ್ಮ ಮನೆಯ ಪರಿಸ್ಥಿತಿಗಳನ್ನು ಅರ್ಥ ಮಾಡಿಕೊಂಡು ಶಿಕ್ಷಣ ಪಡೆಯುತ್ತಿದ್ದರು, ಮತ್ತು ಪಾಲಕರು ತಮ್ಮ ಮಕ್ಕಳ ಶಿಕ್ಷಣದ ಕಲಿಕೆ ಉತ್ತಮ ವಾಗಿಸಲು ಪ್ರತಿಯೊಬ್ಬರು ಕಾಳಜಿ ವಹಿಸುತ್ತಿದ್ದರು, ಆದರೆ ಇಂದಿನ ಶಿಕ್ಷಕರು ಸರ್ಕಾರ ಸೂಚಿಸಿರುವ ನಿಬಂದನೆಗಳಂತೆ ಶಿಕ್ಷಣ ನೀಡಬೇಕಾಗಿದೆ ಎಂದರು.

ಹಳೆಯ ವಿದ್ಯಾರ್ಥಿ ಚಂದ್ರಪ್ಪ ಬಿ ಗುತ್ತಿಗೆದಾರ ಮಾತನಾಡಿ, ಪಾಠ ಹೇಳಿ ಜ್ಞಾನಾರ್ಜನೆ ಮಾಡಿಸಿ ಬದುಕಿಗೆ ಬೆಳಕಾದ ಶಿಕ್ಷಕರನ್ನು ಎಂದಿಗೂ ಮರೆಯಬಾರದು, ಗುರುಗಳ ಸೇವೆಯನ್ನು ಸ್ಮರಿಸುವುದು ಮತ್ತು ಅವರಿಗೆ ಪ್ರತ್ಯಕ್ಷವಾಗಿ ಧನ್ಯತೆ ಸಮರ್ಪಣೆ ಮಾಡುವುದು ಸಾರ್ಥಕದ ಕಾರ್ಯ, ಯಾವುದೇ ಅಪೇಕ್ಷೆ ಇಲ್ಲದೆ ನಮ್ಮ ಭವಿಷ್ಯ ರೂಪಿಸಿದ್ದಾರೆ ಎಂದರು.

ಈ ವೇಳೆ ನಿವೃತ್ತ ಶಿಕ್ಷಕರಾದ ಪ್ರಭುಲಿಂಗಪ್ಪ, ದೈಹಿಕ ಶಿಕ್ಷಕ ಬಸವರಾಜ್, ರಾಜಣ್ಣ, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಎ ಹೆಚ್ ರೂಪಾವತಿ, ಸಿಬ್ಬಂದಿಗಳಾದ ದಯಾನಂದ, ಬಸವನಗೌಡ, ಮಲ್ಲಪ್ಪ, ಮುಖ್ಯ ಶಿಕ್ಷಕ ಸುರೇಶ್, ಹಾಗೂ ಪ್ರಮುಖರಾದ ಸಿ ಚಿದಾನಂದಪ್ಪ, ಶಿವನಗೌಡ. ಹಳೆಯ ವಿದ್ಯಾರ್ಥಿಗಳಾದ ಓ ರಮೇಶ್ ಪೊಲೀಸ್, ಪ್ರಶಾಂತ ಪೊಲೀಸ್, ಉತ್ತಪ್ಪ ಬಣಕಾರ ಪೊಲೀಸ್, ಪ್ರಕಾಶ್ ಟಿ ಶಿಕ್ಷಕ, ಕರಿಬಸವರಾಜ, ಹೆಚ್ ಎಂ ಕೊಟ್ರಯ್ಯ ಪೊಲೀಸ್, ರಘುವೀರ, ಆನಂದ, ಬಸವರಾಜ, ಸವಿತಾ ಎ, ಚಂದ್ರಮ್ಮ, ಶಶಿಕಲಾ, ವೈಶಾಲಿ, ಭಾಗ್ಯ ಹಾಗೂ ಇತರರಿದ್ದರು.

## ದನದ ಕೊಟ್ಟಿಗೆಯಂತಾದ ಬಸ್ ಶೆಲ್ಟರ್‌ಗಳು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಬಸ್ ಶೆಲ್ಟರ್‌ಗಳು ನಿರ್ವಹಣೆಯಿಲ್ಲದೇ ದನದ ದೊಡ್ಡಿಗಳಂತಾಗಿವೆ. ಬಸ್ ಶೆಲ್ಟರ್‌ಗಳಲ್ಲಿ ಬಸ್‌ಗಳು ನಿಲ್ಲುತ್ತಿಲ್ಲ, ಪ್ರಯಾಣಿಕರೂ ಕೂರುತ್ತಿಲ್ಲ. ಹೀಗಾಗಿ, ಅವುಗಳೆಡೆ ಪ.ಪಂ ಕಣ್ತೆರೆದು ನೋಡುತ್ತಿಲ್ಲ.

ಪ್ರಯಾಣಿಕರಿಗೆ ಬಸ್ ಬರುವವರೆಗೆ ಕುಳಿತುಕೊಳ್ಳಲು, ಬಸ್ ಕಾಯಲು ಸ್ಥಳೀಯ ಆಡಳಿತವರ್ಗ ಜನಸಂದಣಿ ಇರುವ ಪ್ರದೇಶದಲ್ಲಿ ಬಸ್ ಶೆಲ್ಟರ್‌ಗಳನ್ನು ನಿರ್ಮಿಸಿದೆ. ನರೇಗಲ್ಲ ಪಟ್ಟಣ ಪಂಚಾಯಿತಿ ವತಿಯಿಂದ ನರೇಗಲ್ಲ ಹಾಗೂ ಮಜರೆ ಗ್ರಾಮಗಳಲ್ಲಿ ಒಟ್ಟು 6 ಬಸ್ ಶೆಲ್ಟರ್‌ಗಳನ್ನು ನಿರ್ಮಿಸಿದ್ದು, ಇದರ ಕಡೆಗೆ ಗಮನ ಹರಿಸಬೇಕಾದ ಪಟ್ಟಣ ಪಂಚಾಯಿತಿಯ ನಿರ್ಲಕ್ಷ್ಯದಿಂದ ಅನೇಕ ತೊಂದರೆಗಳಿಗೆ ಕಾರಣವಾಗಿದೆ.

ಪ.ಪಂ ಈ ಬಸ್ ಶೆಲ್ಟರ್‌ಗಳ ನಿರ್ಮಾಣದ



ನಂತರ ನಿರ್ವಹಣೆಯನ್ನೇ ಮರೆತಿದ್ದು, ಬಸ್ ಶೆಲ್ಟರ್‌ಗಳು ದನದ ಕೊಟ್ಟಿಗೆಯಾಗಿ ಹಾಳು ಸುರಿಯುತ್ತಿವೆ. ಐದು ಶೆಲ್ಟರ್‌ಗಳು ನಿರುಪಯುಕ್ತವಾಗಿದ್ದು, ಕೇವಲ ಹಳೆ ಬಸ್ ನಿಲ್ದಾಣದ ಹತ್ತಿರದ ಶೆಲ್ಟರ್ ಮಾತ್ರ ಸಾರ್ವಜನಿಕರ ಉಪಯೋಗಕ್ಕಿದೆ. ಸರಕಾರದ ಸ್ವತ್ತು ಕಾಯ್ದುಕೊಳ್ಳಬೇಕಾದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಕಣ್ಮುಚ್ಚಿ ಕುಳಿತಿದ್ದು, ಸರಕಾರ ಇತ್ತ ಕಡೆ ಗಮನ ಹರಿಸಬೇಕು, ಬಸ್ ಶೆಲ್ಟರ್‌ಗಳನ್ನು ಶುಚಿಗೊಳಿಸಿ, ಪ್ರಯಾಣಿಕರ ಶಾಪದಿಂದ ಮುಕ್ತಿ ಹೊಂದಬೇಕು ಎನ್ನುವ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ಬಸ್ ಶೆಲ್ಟರ್‌ಗಳನ್ನು ನಿರ್ಮಿಸುವುದು ಮತ್ತು ಅವುಗಳ ನಿರ್ವಹಣೆ ಸ್ಥಳೀಯ ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದ್ದು. ಅವರು ಅವುಗಳನ್ನು ಸುಸ್ಥಿತಿಯಲ್ಲಿಟ್ಟರೆ ಬಸ್ ಶೆಲ್ಟರ್‌ಗಳ ಬಳಿಯಲ್ಲಿಯೆ ಬಸ್ ನಿಲ್ಲಿಸುತ್ತೇವೆಯೇ ಹೊರತು ನಿರ್ಮಾಣ ಮತ್ತು ನಿರ್ವಹಣೆ ನಮ್ಮ ಕೆಲಸವಲ್ಲ ಎನ್ನುತ್ತಾರೆ ರೋಣ ಘಟಕ ವ್ಯವಸ್ಥಾಪಕ ಯಕ್ಲಂಬಿ.

ಪ.ಪಂ ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಪ್ರತಿಕ್ರಿಯಿಸಿ, ಬಸ್ ಶೆಲ್ಟರ್‌ಗಳನ್ನು ಶುಚಿಗೊಳಿಸಲು ಡಿಪೋ ಮ್ಯಾನೇಜರ್ ಜೊತೆ ಮಾತನಾಡುತ್ತೇವೆ. ಒಂದು ವೇಳೆ ಅವರಿಂದ ಸಾಧ್ಯವಿಲ್ಲ ಎಂದಾದರೆ ವಾರಕ್ಕೊಂದು ಬಾರಿ ನಮ್ಮ ಸಿಬ್ಬಂದಿಯ ಸಹಾಯದಿಂದ ಶುಚಿಗೊಳಿಸುತ್ತೇವೆ ಎಂದಿದ್ದಾರೆ.

## ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ, ಶ್ರೇಷ್ಠ ಕೃಷಿ ಮಹಿಳೆ ಪ್ರಶಸ್ತಿಗೆ ಅರ್ಜಿ ಆಹ್ವಾನ


■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ಸೆಪ್ಟೆಂಬರ್ ತಿಂಗಳಲ್ಲಿ ಜರುಗುವ ಕೃಷಿ ಮೇಳ 2025ಕ್ಕೆ "ಜಿಲ್ಲಾ ಮಟ್ಟದ ಶ್ರೇಷ್ಠ ಕೃಷಿಕ" ಮತ್ತು "ಶ್ರೇಷ್ಠ ಕೃಷಿ ಮಹಿಳೆ" ಪ್ರಶಸ್ತಿಗೆ ಅರ್ಜಿ ಕರೆಯಲಾಗಿದೆ.

ಗದಗ ಜಿಲ್ಲೆಯ ಆಸಕ್ತ ರೈತ, ರೈತ ಮಹಿಳೆಯರು ನಿಗದಿತ ಅರ್ಜಿ ನಮೂನೆಯನ್ನು ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಕೃಷಿ ಸಂಶೋಧನಾ ಕೇಂದ್ರ, ಗದಗ ಅಥವಾ ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಗದಗ ಈ ಕಚೇರಿಗಳಿಂದ ಪಡೆಯಬಹುದಾಗಿದೆ.

ಭರ್ತಿ ಮಾಡಿದ ಅರ್ಜಿಯನ್ನು ಜಮೀನಿನ ಉತಾರದೊಂದಿಗೆ ತಾಲ್ಲೂಕು ಮಟ್ಟದ ಕೃಷಿ ಅಧಿಕಾರಿಗಳ ಶಿಫಾರಸ್ಸಿನೊಂದಿಗೆ ದಿ. 31.07.2025 ರ ಒಳಗಾಗಿ ಕಚೇರಿಯ ವೇಳೆಯಲ್ಲಿ (ಸೋಮವಾರದಿಂದ ಶುಕ್ರವಾರ ಬೆಳಿಗ್ಗೆ 9.00 ರಿಂದ ಸಾಯಂಕಾಲ 5.00 ಗಂಟೆಯವರೆಗೆ ಹಾಗೂ ಶನಿವಾರ ಬೆಳಿಗ್ಗೆ 9.00 ರಿಂದ ಮಧ್ಯಾಹ್ನ 1.00 ಗಂಟೆಯವರೆಗೆ) ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಕೃಷಿ ಸಂಶೋಧನಾ ಕೇಂದ್ರ, ಗದಗ ಇವರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಯನ್ನು ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರು, ಕೃಷಿ ಸಂಶೋಧನಾ ಕೇಂದ್ರ, ಗದಗ ಇವರಿಂದ ಪಡೆಯಬಹುದು.

## ನಿಧನ



**ಬೆಟಗೇರಿ:** ಕುಲಕರ್ಣಿಗಲ್ಲಿ ನಿವಾಸಿ ತಬಲಾ ಕಲಾವಿದ ಚನ್ನಪ್ಪ ವೀರಪ್ಪ ಲಕ್ಕುಂಡಿ(74) ಸೋಮವಾರ ಬೆಳಿಗ್ಗೆ ನಿಧನರಾದರು. ಅಂದೇ ಸಂಜೆ ಅಂತ್ಯಕ್ರಿಯೆ ಜರುಗಿತು.

ಮೃತರು ದಿ. ಹೀರಾಸಿಂಗ ಡಂಬಳ ಅವರಲ್ಲಿ ಶಿಷ್ಯರಾಗಿ ತಬಲಾ ವಾದನದಲ್ಲಿ ನುರಿತಿದ್ದರು. ಜನ್ಮತಃ ಅಂಧರಾಗಿದ್ದರೂ ತುಂಬಾ ಸಂಗೀತಾಸಕ್ತಿ ಹೊಂದಿದ್ದರು. ಮೃತರು ಈರ್ವರು ಸಹೋದರರು ಓರ್ವ ಸಹೋದರಿ ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

ಸಂತಾಪ: ಎಂ.ಜಿ. ಕುಲಕರ್ಣಿ, ಅಶೋಕ ಕಣಗಿನಹಾಳ, ನಗರಸಭಾ ಸದಸ್ಯ ಚಂದ್ರು ಕರಿಸೋಮನಗೌಡ್ರ ಹಾಗೂ ವೀರ ಪುಲಕೇಶಿ ಯುವಕ ಸಂಘದ ಸರ್ವ ಸದಸ್ಯರು ಸಂತಾಪ ಸೂಚಿಸಿದ್ದಾರೆ.

## ನಿಡಗುಂದಿ ಶಾಲೆಗೆ ಜಿ.ಪಂ ಸಿಇಒ ಭೇಟಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿಯ ಬಾಲಕರ ಮಾದರಿ ಕೇಂದ್ರ ಶಾಲೆಗೆ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ್ ಎಸ್ ಭೇಟಿ ನೀಡಿ ಶಾಲೆಯ ಎಲ್ಲ ವಿಭಾಗಗಳ ಕಾರ್ಯ ವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲೆಯ ಮುಖ್ಯ ಶಿಕ್ಷಕಿ ಲಲಿತಾ ಕಳಕಣ್ಣವರ ಅಧಿಕಾರಿಗಳನ್ನು ಸ್ವಾಗತಿಸಿ ಶಾಲೆಯ ಎಲ್ಲ ವಿಭಾಗಗಳನ್ನು ಪರಿಚಯಿಸಿದರು. ಶಾಲಾ ಕಚೇರಿ ಮತ್ತು ಮುಖ್ಯ ದಾಖಲೆಗಳನ್ನು ಪರಿಶೀಲಿಸಿದ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಅಕ್ಷರ ದಾಸೋಹದ ಕೋಣೆಗೆ ತೆರಳಿ ಅಲ್ಲಿನ ಅಡುಗೆ ವ್ಯವಸ್ಥೆಯನ್ನು, ಅಡುಗೆದಾರರ ಶಿಸ್ತನ್ನು ಗಮನಿಸಿದರು.

ವರ್ಗ ಕೋಣೆಗಳಿಗೆ ತೆರಳಿ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯದ ಬಗ್ಗೆ ವಿಚಾರಿಸಿದರು. ಸಹ ಶಿಕ್ಷಕರಿಂದ ಅನೇಕ ಮಾಹಿತಿಗಳನ್ನು ಪಡೆದುಕೊಂಡ ಕಾರ್ಯನಿರ್ವಾಹಕ ಅಧಿಕಾರಿಗಳು, ಒಟ್ಟಾರೆ ಶಾಲೆಯ ಪ್ರಗತಿಯ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು. ನಂತರ ಶಾಲಾ ಸಿಬ್ಬಂದಿಯವರೊಂದಿಗೆ ಸಭೆ ನಡೆಸಿದ ಅವರು, ಶಾಲೆಯ ಕಲಿಕಾ ಪ್ರಗತಿ, ವಿದ್ಯಾರ್ಥಿಗಳ ದಾಖಲಾತಿ, ಹಾಜರಾತಿ ಹೆಚ್ಚಿಸುವ ಕುರಿತು ಅನೇಕ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಪ್ರಭಾರಿ ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎ. ಫಣಿಬಂದ, ತಾಲೂಕಾ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಆರ್.ಎಲ್. ನಾಯಕ, ಎಂ.ಬಿ. ದೊಡ್ಡಮನಿ, ಶಿಕ್ಷಕಿಯರಾದ ಎಸ್.ಕೆ. ಕೊಟಗಿ, ಪಿ.ಕೆ. ಶೇಬಗೊಂಡ, ಡಿ.ಎಸ್. ಮುಂಡರಗಿ, ಗ್ರಾ.ಪಂ ಅಧ್ಯಕ್ಷರು, ಅಧಿಕಾರಿಗಳು ಉಪಸ್ಥಿತರಿದ್ದರು.

## ದೂರುಗಳಿಗಾಗಿ ಕರೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಗದಗ-ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿರುವ 01 ರಿಂದ 35 ವಾರ್ಡ್‌ಗಳ ನಾಗರಿಕರು ಕುಡಿಯುವ ನೀರಿನ ಪೂರೈಕೆ, ಬೀದಿ ದೀಪ ನಿರ್ವಹಣೆ, ರಸ್ತೆ, ಚರಂಡಿ ಸ್ವಚ್ಛತೆಗಳ ಕುರಿತು ಯಾವುದೇ ತೊಂದರೆ ಉಂಟಾದಲ್ಲಿ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ 08372-278504 ಗೆ ಕರೆ ಮಾಡಿ ತಮ್ಮ ದೂರನ್ನು ದಾಖಲಿಸಬಹುದಾಗಿದೆ ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫಲಾನುಭವಿಗಳ ತುರ್ತು ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ರಹಮತನಗರ ಮತ್ತು ಗಂಗಿಮಡಿ ಮುಖ್ಯ ರಸ್ತೆಯಲ್ಲಿರುವ ನವನಗರ ಪ್ರದೇಶದಲ್ಲಿ 2001 ಹಾಗೂ 2009ರಲ್ಲಿ ನಿವೇಶನಗಳನ್ನು ಪಡೆದುಕೊಂಡಿರುವ ಫಲಾನುಭವಿಗಳ ತುರ್ತು ಸಭೆಯನ್ನು ಜುಲೈ 9ರಂದು ಸಂಜೆ 5 ಗಂಟೆಗೆ ನವನಗರ ಶಾಖೆ ಸಮಿತಿ ಕಾರ್ಯಾಲಯದಲ್ಲಿ ಕರೆಯಲಾಗಿದೆ. ಈ ಸಭೆಯಲ್ಲಿ ಸರ್ಕಾರದಿಂದ ಮನೆಗಳನ್ನು ನಿರ್ಮಿಸಿಕೊಳ್ಳಲು ಮತ್ತು ನವನಗರ ಸ್ಲಂ ಪ್ರದೇಶದ ನಿವೇಶನಗಳನ್ನು ಭೂಗಳ್ಳರು ಕಬಳಿಸಲು ಪ್ರಯತ್ನ ನಡೆಸುತ್ತಿರುವುದನ್ನು ಖಂಡಿಸಿ ಸಂಘಟನೆಯ ನೇತೃತ್ವದಲ್ಲಿ ನಿರಂತರ ಹೋರಾಟಗಳನ್ನು ನಡೆಸಲು ಹಾಗೂ ಕಾನೂನು ಹೋರಾಟಕ್ಕೆ ಸಜ್ಜಾಗಲು ಚರ್ಚಿಸಲಾಗುವುದು. ನವನಗರದ ಸ್ಲಂ ಪ್ರದೇಶದ ನಿವಾಸಿಗಳು ಈ ಸಭೆಯಲ್ಲಿ ತಪ್ಪದೇ ಭಾಗವಹಿಸಿ ಸಲಹೆ-ಸೂಚನೆಗಳು ನೀಡಬೇಕೆಂದು ನವನಗರ ಸ್ಲಂ ಪ್ರದೇಶದ ಸಮಿತಿ ಅಧ್ಯಕ್ಷ ಮೆಹಬೂಬಸಾಬ ಬಳ್ಳಾರಿ, ಉಪಾಧ್ಯಕ್ಷರಾದ ಸಲೀಂ ಹರಿಹರ ಹಾಗೂ ಕಾರ್ಯದರ್ಶಿ ಖಾಜಾಸಾಬ ಇಸ್ಮಾಯಿಲನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

## ನಾಡು ಕಂಡ ಅಪರೂಪದ ಗಾನಕೋಗಿಲೆ ಗೌರಮ್ಮ

■ವಿಜಯಸಾಕ್ಷಿ ಸುದ್ದಿ, ಗದಗ

ಜಾನಪದ ಸಾಮಾನ್ಯವಾಗಿ ಅನಕ್ಷರಸ್ಥರ ಜ್ಞಾನವಾಗಿದೆ. ಇದರಲ್ಲಿ ಆಡುಮಾತಿನ ಸೊಗಸಿದೆ. ಅದು ಸರಳ ಸ್ಪಷ್ಟತೆಯಿಂದ ಕೂಡಿದೆ. ಅಕ್ಷರದ ಅರಿವು ಇಲ್ಲದಿದ್ದರೂ ಸಾವಿರಾರು ಹಾಡುಗಳನ್ನು ಹೇಳುವ ಗೌರಮ್ಮ ಚಲವಾದಿ ನಮ್ಮ ನಾಡಿನ ಹೆಮ್ಮೆ ಮತ್ತು ನಾಡು ಕಂಡ ಅಪರೂಪದ ಗಾನಕೋಗಿಲೆ ಎಂದು ಡಾ. ತೋಂಟದ ಸಿದ್ದರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ 2752ನೇ ಶಿವಾನುಭವದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಶ್ರೀಗಳು, ಜನಪದರು ತಮಗೆ ಅನಿಸಿದ ಭಾವನೆಗಳನ್ನು ಸರಳವಾಗಿ ಹೇಳಿದರೂ ಅದರ ಅರ್ಥದ ನಿಗೂಢತೆ ಮಿಗಿಲಾದುದು. ಗೌರಮ್ಮ ಬದುಕಿನಲ್ಲಿ ಕಷ್ಟ-ನಷ್ಟಗಳನ್ನು ಅನುಭವಿಸಿ ಹಾಡಿನಲ್ಲಿ ಮರೆತು ಹಾಡುತ್ತಿದ್ದರು. ಜನರಿಗೆ ಸಂತೋಷ ಕೊಡುತ್ತಿದ್ದರು. ಅವರ ಬದುಕೇ ಜಾನಪದಮಯವಾಗಿತ್ತು. ಹಾಡು ಎಂದರೆ ಎಲ್ಲಿಲ್ಲದ ಉತ್ಸಾಹ. ದಿನವಿಡೀ ಹಾಡಿದರೂ ದಣಿವಿಲ್ಲದೇ ಹಾಡುತ್ತಾ ವೇದನೆ ಮರೆತು, ಸಾಧನೆ ಮಾಡಿದ ಗೌರಮ್ಮ ಜಾನಪದ ಕೋಗಿಲೆ ಎಂದರು.

ಪೂಜ್ಯ ಜಗದ್ಗುರು ಸಿದ್ದಲಿಂಗ ಸ್ವಾಮೀಜಿಗಳು



ಬರುವುದನ್ನು ನೋಡಿ, ಅಲ್ಲಿಯೇ ಹಾಡು ಕಟ್ಟಿ, ಹಾಡುವುದನ್ನು ಕಂಡಾಗ ಸಿದ್ದಲಿಂಗ ಸ್ವಾಮೀಜಿಗಳ ಆನಂದ ಹೇಳತೀರದು. ಶ್ರೇಷ್ಠ ಸಾಧಕಿ ಜಾನಪದ ಗಾಯಕಿ ಗೌರಮ್ಮ, ಅವರ ಬಗ್ಗೆ ಪುಣ್ಯ ಪುರುಷರ ಮಾಲಿಕೆಯಲ್ಲಿ ಜಾನಪದ ಕೋಗಿಲೆ ಗೌರಮ್ಮ ಪುಸ್ತಕವನ್ನು ಪ್ರಕಟಿಸಿದರು. ಗೌರಮ್ಮ ಓದದಿದ್ದರೂ ಜಾನಪದ ಕಲೆ ಒಲಿದಿತ್ತು. ಇಂಥ ಗಾಯಕಿಯರು ಇದ್ದುದರಿಂದಲೇ ಜಾನಪದ ಇಂದಿಗೂ ನಳನಳಿಸುತ್ತಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಮಹೇಶ್‌ಗೌಡ ಪೊಲೀಸ್‌ಪಾಟೀಲ್, ಸಿದ್ದಣ್ಣ ಬಂಗಾರಶೆಟ್ಟರ್, ಕೆ.ಎಸ್. ಚಟ್ಟಿ ಇವರನ್ನು ಶ್ರೀಗಳು ಆಶೀರ್ವದಿಸಿದರು. ಮೃತ್ಯುಂಜಯ ಹಿರೇಮಠ ಹಾಗೂ ಗುರುನಾಥ್ ಸುತಾರ ಮತ್ತು ಸೋಮನಾಥ ದೊಡ್ಡಮನಿ ಸಂಗೀತ ಸೇವೆಯನ್ನು ನಡೆಸಿಕೊಟ್ಟರು. ಧರ್ಮಗ್ರಂಥ ಪಠಣವನ್ನು ಖುಷಿ ಎಂ.ಲಕ್ಕುಂಡಿ ಹಾಗೂ ವಚನ ಚಿಂತನವನ್ನು ಶ್ರದ್ಧಾ ಎಸ್.ಹೂಲಿ ನಡೆಸಿದರು. ದಾಸೋಹ ಸೇವೆಯನ್ನು ಮಲ್ಲಿಕಾರ್ಜುನ ಚಲವಾದಿ ಹಾಗೂ ಪರಿವಾರದವರು ವಹಿಸಿಕೊಂಡಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಪ್ರಭು ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ ಹಾಗೂ ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಹಾಗೂ ಶ್ರೀಮಠದ ಭಕ್ತರು ಉಪಸ್ಥಿತರಿದ್ದರು. ಸೋಮನಾಥ ಪುರಾಣಿಕ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

> ಉಪನ್ಯಾಸಕರಾಗಿ ಆಗಮಿಸಿದ ಇಲಕಲ್ಲದ ಅಂತಾರಾಷ್ಟ್ರೀಯ ಚಿತ್ರಕಲಾವಿದ ಡಾ. ಬಸವರಾಜ ಗವಿಮಠ ಗಾನ ಭಾವನೆಯ ಜೀವಂತ ಪ್ರತಿರೂಪ ಜಾನಪದ ಕೋಗಿಲೆ ಗೌರಮ್ಮ ಚಲವಾದಿಯವರ ಕುರಿತು ಮಾತನಾಡುತ್ತಾ, ಗೌರಮ್ಮನ ಹಾಡು ನಿಲ್ಲದ ಹಾಡು. ಒಂದೂವರೆ ಸಾವಿರ ಹಾಡುಗಳನ್ನು ಬಿಡುವಿಲ್ಲದೆ, ದಣಿವಿಲ್ಲದೆ ಹಾಡುತ್ತಿದ್ದರು. ಅವರ ಅದ್ಭುತ ನೆನಪಿನ ಶಕ್ತಿ ಮೆಚ್ಚುವಂತದ್ದು. ಇಂಥ ಗಾಯಕಿಯ ಜೀವನ ಚರಿತ್ರೆ ಪಠ್ಯಪುಸ್ತಕಗಳಲ್ಲಿ ಬರಬೇಕು ಎಂದರು.

### ವೇತನ ಪಾವತಿಗಾಗಿ ನರೇಗಾ ಹೊರಗುತ್ತಿಗೆ ನೌಕರರ ಅಸಹಕಾರ ಚಳುವಳಿ ಆರಂಭ

## ಸರ್ಕಾರ ಸಮಸ್ಯೆ ಬಗೆಹರಿಸಲು ಮುಂದಾಗಲಿ

■ವಿಜಯಸಾಕ್ಷಿ ಸುದ್ದಿ, ರೋಣ

6 ತಿಂಗಳ ವೇತನ ಪಾವತಿ, ಸೇವಾ ಭದ್ರತೆ, ಆರೋಗ್ಯ ವಿಮೆ, ಕೆಲಸದ ಸ್ಥಳದಲ್ಲಿ ಭದ್ರತೆ ಒದಗಿಸುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ನರೇಗಾ ಹೊರಗುತ್ತಿಗೆ ನೌಕರರು ತಮ್ಮ ಕೆಲಸ-ಕಾರ್ಯಗಳನ್ನು ಸ್ಥಗಿತಗೊಳಿಸಿ ತಾಲೂಕು ಪಂಚಾಯಿತಿ ಕಚೇರಿಯಲ್ಲಿ ಸೋಮವಾರ ಅಸಹಕಾರ ಚಳುವಳಿ ನಡೆಸಿದರು.

ಈ ವೇಳೆ ನರೇಗಾ ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಬಾಳಿಕಾಯಿ ಮಾತನಾಡಿ, ಕೂಲಿಕಾರರಿಗೆ ನರೇಗಾ ಕೆಲಸ ಕೊಡಿಸುವುದು, ಯೋಜನೆಯಡಿ ಹಳ್ಳಿಗಳಲ್ಲಿ ಆಸ್ತಿ ಸೃಜನೆಗಳಲ್ಲಿ ನರೇಗಾ ನೌಕರರ ಪಾತ್ರ ಬಹು ಮುಖ್ಯವಾಗಿದೆ. ಆದರೆ, ನೌಕರರಿಗೆ ಪ್ರತಿ ತಿಂಗಳು ವೇತನ ಸರಿಯಾಗಿ ಆಗದೆ ಸಮಸ್ಯೆ ಎದುರಿಸುತ್ತಿದ್ದಾರೆ. ಈ



> ತಾಲೂಕಾ ಅಡ್ಮಿನ್ ಅಸಿಸ್ಟೆಂಟ್ ಅರುಣ ಶಿಂಗ್ರಿ ನರೇಗಾ ಸಿಬ್ಬಂದಿಗಳೊಂದಿಗೆ ಚರ್ಚಿಸಿ, ಈ ಅಸಹಕಾರ ಚಳುವಳಿ ವೇತನ ಪಾವತಿ ಅಷ್ಟೇ ಅಲ್ಲ, ಆರೋಗ್ಯ ವಿಮೆ, ಸೇವಾ ಭದ್ರತೆ ಸೇರಿ ವಿವಿಧ ಬೇಡಿಕೆಗಳಿಗಾಗಿ ನಡೆಯುತ್ತಿದೆ. ಇಂದಿನಿಂದ ಅಸಹಕಾರ ಚಳುಚಳಿ ಆರಂಭವಾಗಿದ್ದು, ವೇತನ ಪಾವತಿಯಾಗುವವರೆಗೂ ನಿರಂತರವಾಗಿ ಚಳುವಳಿ ನಡೆಸಲಾಗುತ್ತದೆ ಎಂದರು.

ಹಿನ್ನೆಲೆಯಲ್ಲಿ ಸರ್ಕಾರ ಕೂಡಲೇ ಸಮಸ್ಯೆ ಬಗೆಹರಿಸಬೇಕೆಂದು ಒತ್ತಾಯಿಸಿದರು.

ಮಕ್ಕಳ ಶಾಲಾ ದಾಖಲಾತಿ, ಕುಟುಂಬದ ನಿರ್ವಹಣೆ, ಕೌಟುಂಬಿಕ ಆರೋಗ್ಯ ಸಮಸ್ಯೆಗೆ ವೇತನ ಪಾವತಿಯಾಗದೆ ಇರುವ ಕಾರಣ ರಾಜ್ಯ ಸಂಘದ ನಿರ್ದೇಶನದಂತೆ ರಾಜ್ಯಾದ್ಯಂತ ಅಸಹಕಾರ ಚಳುವಳಿ ಆರಂಭಿಸಲಾಗಿದೆ. ನಮ್ಮ ತಾಲೂಕಿನ ಎಲ್ಲಾ ನರೇಗಾ ನೌಕರರು ಕಚೇರಿಗೆ ಹಾಜರಾಗಿದ್ದರೂ ಯಾವುದೇ ಕೆಲಸ ಮಾಡದೆ ಅಸಹಕಾರ ಚಳುವಳಿ ಹಮ್ಮಿಕೊಂಡಿದ್ದೇವೆ ಎಂದರು.

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ತಾಲೂಕು ಹಂತದಲ್ಲಿ ಟಿಐಇಸಿ, ಟಿಸಿ, ಟಿಎಂಐಎಸ್, ಟಿಎಇ (ಸಿವಿಲ್, ತೋಟಗಾರಿಕೆ, ರೇಷ್ಮೆ, ಅರಣ್ಯ, ಕೃಷಿ) ವಿಭಾಗದಲ್ಲಿ ಹಾಗೂ ಬಿಎಫ್ಟಿ ಸೇರಿ ವಿವಿಧ ಹುದ್ದೆಗಳಲ್ಲಿ 13ಕ್ಕೂ ಹೆಚ್ಚು ಜನ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಎಲ್ಲ ನರೇಗಾ ಯೋಜನೆಯ ಸಿಬ್ಬಂದಿಗೆ ಕಳೆದ 6 ತಿಂಗಳಿಂದ ವೇತನ ಪಾವತಿಯಾಗಿಲ್ಲ. ಸರ್ಕಾರ ಕೂಡಲೇ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು ಎಂದರು.

ಈ ಸಂದರ್ಭದಲ್ಲಿ ನರೇಗಾ ನೌಕರರಾದ ಅರುಣ ತಂಬ್ರಳ್ಳಿ, ವಂಸತ ಅನ್ವಾರಿ, ಶಾಂತಾ ತಿಮ್ಮರೆಡ್ಡಿ, ರೇಷ್ಮಾ ಕೇಲೂರ, ಮಂಜುಳಾ ಪಾಟೀಲ, ಅಶೋಕ ಕಂಬಳಿ, ಪ್ರಕಾಶ ಅಂಬಕ್ಕಿ, ಯಲ್ಲಪ್ಪ ಗೋರವರ, ಪ್ರಕಾಶ ತಳವಾರ, ಸೇರಿದಂತೆ ಇನ್ನಿತರ ನರೇಗಾ ಸಿಬ್ಬಂದಿಗಳು ಇದ್ದರು.

## ಮೊಹರಂ ಹಿನ್ನೆಲೆ: ಶರಬತ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮೊಹರಂ ಹಬ್ಬದ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅಂಜುಮನ್ ಇಸ್ಲಾಂ ಸಂಸ್ಥೆಯಿಂದ ಭಾನುವಾರ ಶರಬತ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ, ಅಂಜುಮನ್ ಇಸ್ಲಾಂ ಸಂಸ್ಥೆಯ ಅಧ್ಯಕ್ಷ ತಾಜುದ್ದೀನ್ ಕಿಂಡ್ರಿ, ಮೊಹರಂ ಹಬ್ಬವು ಮುಸ್ಲಿಂ ಧರ್ಮೀಯರಿಗೆ ಅತ್ಯಂತ ವಿಶೇಷವಾದ ಹಾಗೂ ದೊಡ್ಡ ಹಬ್ಬಗಳಲ್ಲಿ ಒಂದಾಗಿದೆ. ಇದು ಹೊಸ ವರ್ಷದ ಆರಂಭ ಕೂಡ ಆಗಿದ್ದು, ಹೊಸ ಹಿಜರಿಶಕೆ ವರ್ಷದ ಆರಂಭ. ಇಸ್ಲಾಂನಲ್ಲಿ ನಾಲ್ಕು ಪವಿತ್ರ ತಿಂಗಳುಗಳಲ್ಲಿ ಒಂದಾಗಿ ಆಚರಿಸಲಾಗುವ ಮೊಹರಂ ಹಬ್ಬವು ಆಳವಾದ ಆಧ್ಯಾತ್ಮಿಕ ಮತ್ತು ಐತಿಹಾಸಿಕ ಮಹತ್ವವನ್ನು ಹೊಂದಿದ ದಿನವಾಗಿದೆ. ಮೊಹಮ್ಮದ್ ಪೈಗಂಬರ್ ಅವರ ಮುದ್ದಿನ ಮೊಮ್ಮೊಕ್ಕಳಾದ ಹಜರತ್ ಹಸನ-ಹುಸೇನ ಹುತಾತ್ಮರಾದ ಶೋಕದ ದಿನವಾಗಿದೆ ಎಂದರು.

ಈದ್ಗಾ ಇಮಾಮ್ ಇಸ್ಮಾಯಿಲ್ ಖಾಜಿ ಅವರು ಪಾತಿಹಾ ಖಾನಿ ಮಾಡಿದರು. ಈ ಸಂದರ್ಭದಲ್ಲಿ ಹಿರಿಯರಾದ ಹಸನಸಾಬ್ ಶೇಖ, ಮಾಬುಸಾಬ ಹುಳ್ಳಿ, ಇಮಾಮಸಾಬ್ ಖವಾಸ, ಇಮಾಮಸಾಬ ಸುಂಕದ, ಅಬ್ದುಲ್ ಹಮೀದ್ ಮುಜಾವರ, ಮಹಮ್ಮದ್ ಶಫಿ ಶಿದ್ದಿ, ಮೌಲಾಸಾಬ್ ಸದರಬಾವಿ, ಹೈದರ್ ಖವಾಸ, ಮುನ್ನಾ ಢಾಲಾಯತ್, ದಾವಲಸಾಬ ಲಕ್ಷ್ಮೇಶ್ವರ, ಮಾಬುಸಾಬ ಅಬ್ಬುನವರ, ದಾವಲಸಾಬ ಕುರ್ತಕೋಟಿ, ಮುನ್ನಾ ಢಾಲಾಯತ್, ಸದ್ದಾಂ ಹಗರಿ, ಇಸಾಕ್ ಹೊಸಮನಿ, ಮಾಬುಲಿ ದುರ್ಗಿಗುಡಿ, ದಾವೂದ ಜಮಾಲ ಹಾಗೂ ಇತರರು ಹಾಜರಿದ್ದರು.

## ವಿಶೇಷ ಸಹಕಾರ ತರಬೇತಿ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆ, ಗದಗ ಹಾಗೂ ಧಾರವಾಡ ಹಾಲು ಒಕ್ಕೂಟ, ಧಾರವಾಡ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ತಾಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ಸಹಕಾರ ತರಬೇತಿ ಶಿಬಿರ ದಿನಾಂಕ: 08.07.2025 ಮಂಗಳವಾರ ರಂದು ಬೆಳಿಗ್ಗೆ 10-00 ಘಂಟೆಗೆ ಪಶು ವೈದ್ಯಕೀಯ ಪಾಲಿಕ್ಲಿನಿಕ್ ಇದರ ಸಭಾಭವನ, ಗದಗ ಹಳೇ ಬಸ್ ನಿಲ್ದಾಣದ ಎದುರಿಗೆ, ತಾ.ಜಿ.ಗದಗದಲ್ಲಿ ಜರುಗಲಿದೆ.

ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷರಾದ ಸಿ. ಎಂ. ಪಾಟೀಲರವರು ವಹಿಸುವರು.

ಉದ್ಘಾಟನೆಯು ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ ನಿ., ಬೆಂಗಳೂರು ಇದರ ನಿರ್ದೇಶಕರಾದ ಎಚ್. ಜಿ. ಹಿರೇಗೌಡ್ರ ಇವರಿಂದ ಜರುಗುವುದು. ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆ, ಗದಗ ಜಿಲ್ಲೆಯ ಉಪನಿರ್ದೇಶಕರಾದ ಡಾ. ಎಚ್. ಬಿ. ಹುಲ್ಲಣ್ಣವರ ಇವರಿಂದ ಸಸಿ ನೆಡುವ ಕಾರ್ಯಕ್ರಮ ನೆರವೇರಿಸಲಾಗುವುದು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಉಪಾಧ್ಯಕ್ಷರಾದ ವಾಯ್. ಎಫ್. ಪಾಟೀಲ, ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ನಿರ್ದೇಶಕರುಗಳಾದ ಎಂ. ಎಫ್. ಕಲಗುಡಿ, ಎಸ್. ಎಸ್. ಪಟ್ಟಣಶೆಟ್ಟಿ, ಎಸ್. ಕೆ. ಕುರಡಗಿ ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಗದಗ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕಿಯರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ಮುಖ್ಯ ಪಶುವೈದ್ಯಾಧಿಕಾರಿಗಳಾದ ಎಚ್. ವಾಯ್. ಹಿನ್ನಿನಾಯ್ಕರ್, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಿ. ಟಿ. ಕಳಸದ, ಧಾರವಾಡ ಹಾಲು ಒಕ್ಕೂಟದ ವಿಶ್ರಾಂತ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವೀರೇಶ ಎಸ್. ತರಲಿ, ಗದಗ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಶ್ರೀಮತಿ ಎಚ್. ಎಂ. ಶಾಂತಾ, ಧಾರವಾಡ ಹಾಲು ಒಕ್ಕೂಟದ ಗದಗ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಎಸ್. ಪಟ್ಟೇದ, ಧಾರವಾಡ ಹಾಲು ಒಕ್ಕೂಟದ ನರಗುಂದ ಹಾಗೂ ಗದಗ ತಾಲೂಕಿನ ವಿಸ್ತರಣಾಧಿಕಾರಿಗಳಾದ ದಿಲೀಪ್ ಆಯ್. ನದಾಫ, ಕಿರಣಕುಮಾರ ಅ. ಹುಗ್ಗಿ ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸುವರು ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ತಿಳಿಸಿದ್ದಾರೆ.

ತರಬೇತಿ ಕಾರ್ಯಾಗಾರದಲ್ಲಿ ಹೈನುಗಾರಿಕೆಯಲ್ಲಿ ರೈತರು ಎದುರುಸುತ್ತಿರುವ ಸಮಸ್ಯೆಗಳ ಕುರಿತು, ಡಾ. ವಿರೇಶ ಎಸ್. ತರಲಿ ವಿಶ್ರಾಂತ ವ್ಯವಸ್ಥಾಪಕ ನಿರ್ದೇಶಕರು, ಧಾರವಾಡ ಹಾಲು ಒಕ್ಕೂಟ, ಧಾರವಾಡ, ಶುದ್ಧ ಹಾಗೂ ಅಧಿಕ ಹಾಲು ಉತ್ಪಾದನೆ ಕುರಿತು ಡಾ. ಜಗದೀಶ ಎಸ್. ಮಟ್ಟಿ ಮುಖ್ಯ ಪಶುವೈದ್ಯಾಧಿಕಾರಿಗಳು ಸಂಚಾರಿ ಹಾಗೂ ವಿಸ್ತರಣೆ, ಗದಗ ಹಾಗೂ ಪಶು ಆಹಾರ ಮತ್ತು ಮೇವಿನ ಬೆಳೆಗಳ ಕುರಿತು, ಡಾ. ಎಂ. ಬಿ. ಮಡಿವಾಳರ ವಿಶ್ರಾಂತ ಜಂಟಿ ನಿರ್ದೇಶಕರು, ಕ.ಹಾ.ಮ. ತರಬೇತಿ ಕೇಂದ್ರ ರಾಯಾಪೂರ, ಧಾರವಾಡ ಇವರು ಉಪನ್ಯಾಸ ನೀಡುವರು.

### ಜೈನ್ ಸಮಾಜದ ಆಚಾರ್ಯ ಪೂಜ್ಯ ಶ್ರೀ ವಿಮಲಸಾಗರ ಸುರಜೀ ಗದುಗಿಗೆ

## ಬೃಹತ್ ಕುಂಭ ಮೆರವಣಿಗೆಯೊಂದಿಗೆ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಗದಗ

ಚಾತುರ್ಮಾಸದ ಪ್ರಯುಕ್ತ ಗದಗ ನಗರದಲ್ಲಿ ನಾಲ್ಕು ತಿಂಗಳ ಕಾಲ ಜೈನ ಸಮಾಜ ಬಾಂಧವರಿಗೆ ಧರ್ಮ ಜಾಗೃತಿ, ಧರ್ಮೋಪದೇಶ ನೀಡಲು ಆಗಮಿಸಿರುವ ಜೈನ್ ಸಮಾಜ ಹಿರಿಯ ಆಚಾರ್ಯರಾದ ಆಚಾರ್ಯ ಪೂಜ್ಯ ಶ್ರೀ ವಿಮಲಸಾಗರ ಸುರಜೀ ಹಾಗೂ ಐವರು ಜೈನ್ ಯುವ ಮುನಿಗಳನ್ನು ಸೋಮವಾರ ಮುಂಜಾನೆ ಗದುಗಿನ ಸಮಸ್ತ ಜೈನ್ ಸಮಾಜಬಾಂಧವರು ಬೃಹತ್ ಮೆರವಣಿಗೆ ಮೂಲಕ ಬರಮಾಡಿಕೊಂಡರು.

ಗದುಗಿನ ಲಾಲಿದೇವಿ ರೂಪಚಂದ ಬಾಫಣಾ (ಪಂಕಜ್ ಆರ್.ಬಾಫಣಾ) ಅವರ ನಿವಾಸದಿಂದ ನಗರದ ಶ್ರೀ ಪಾರ್ಶ್ವನಾಥ ಜೈನ್ ಮೂರ್ತಿ ಪೂಜಕ ಸಂಘ ಹಾಗೂ ಸಮಸ್ತ ಜೈನ್ ಸಮಾಜಬಾಂಧವರು ಶ್ರದ್ಧಾಭಕ್ತಿಯೊಂದಿಗೆ ನಗರದ ಸ್ಟೇಷನ್ ರೋಡ್‌ನ ಪಾರ್ಶ್ವನಾಥ ಜೈನ್ ದೇವಸ್ಥಾನಕ್ಕೆ ಬರಮಾಡಿಕೊಂಡರು.



> ಗನಿವರ್ಯ ಶ್ರೀ ಪದ್ಮಾವಿಮಲ್ ಸಾಗರಜೀ ಮಾರಾಸಾಹೇಬ, ಮುನಿಶ್ರೀ ನಿಗ್ರಹಗ್ರಾನಾಥಾ ವಿಮಲ ಸಾಗರರಜೀ ಮಾರಾಸಾಹೇಬ, ಮುನಿಶ್ರೀ ತತ್ವವಿಮಲ ಸಾಗರಜೀ ಮಾರಾಸಾಹೇಬ, ಮುನಿಶ್ರೀ ತೀರ್ಥವಿಮಲ ಸಾಗರಜೀ ಮಾರಾಸಾಹೇಬ ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಚಾತುರ್ಮಾಸದ ಕಾರ್ಯಕ್ರಮಕ್ಕೆ ದೇಣಿಗೆ ನೀಡಿದ ಸಮಾಜದ ಗಣ್ಯರು, ದಾನಿಗಳು ದಂಪತಿ ಸಮೇತರಾಗಿ ಜ್ಯೋತಿ ಬೆಳಗಿಸಿ ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಪಾರ್ಶ್ವನಾಥ ಜೈನ್ ದೇವಸ್ಥಾನದ ಆವರಣದಲ್ಲಿ ನಿರ್ಮಿಸಲಾಗಿರುವ ಅಲಂಕೃತ ಬೃಹತ್ ವೇದಿಕೆಯಲ್ಲಿ ವಿರಾಜಮಾನರಾದ ಆಚಾರ್ಯ ಪೂಜ್ಯ ಶ್ರೀ ವಿಮಲಸಾಗರ ಸುರಜೀ ಅವರು ಸಮಸ್ತ ಜೈನ ಸಮಾಜಬಾಂಧವರಿಗೆ ದರ್ಶನಾಶೀರ್ವಾದ ನೀಡಿದರು.

ಜು. 8ರಿಂದ ನಾಲ್ಕು ತಿಂಗಳವರೆಗೆ ಗದುಗಿನ ಪಾರ್ಶ್ವನಾಥ ಜೈನ್‌ದಲ್ಲಿ ಚಾತುರ್ಮಾಸದ ಪ್ರಯುಕ್ತ ನಿತ್ಯ ಮುಂಜಾನೆ 8.45 ಗಂಟೆಯಿಂದ 10 ಗಂಟೆಯವರೆಗೆ ಧರ್ಮೋಪದೇಶ ಮಾಡುವರು.

ಸಮಸ್ತ ಜೈನ್ ಸಮಾಜಬಾಂಧವರು ಸೇರಿದಂತೆ ಶ್ರೀ ಪಾರ್ಶ್ವನಾಥ ಜೈನ್ ಮೂರ್ತಿ ಪೂಜಕ ಸಂಘದ ಅಧ್ಯಕ್ಷ ಪಂಕಜ್ ರೂಪಚಂದ ಬಾಫಣಾ, ಕಾರ್ಯದರ್ಶಿ ಹರೀಶ್ ಶಹಾ ಸೇರಿದಂತೆ ಪದಾಧಿಕಾರಿಗಳು, ಟ್ರಸ್ಟ್ ಕಮಿಟಿ ಚೇರಮನ್ ದಲಿಚಂದ ಕವಾಡ, ಖಜಾಂಚಿ ಜೀತೇಂದ್ರ ಶಹಾ, ಟ್ರಸ್ಟಿ ಜವಾಹರಲಾಲ ಬಂದಾ, ನಿರ್ಭಯಲಾಲ ಹುಂಡಿಯಾ, ಗೌತಮ್‌ಚಂದ ಕವಾಡ ಮುಂತಾದವರಿದ್ದರು.

## ಬೀದಿ ನಾಟಕ, ಜಾನಪದ ಸಂಗೀತ ಕಲಾತಂಡಗಳಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸರ್ಕಾರದ ಯೋಜನೆಗಳನ್ನು ಪ್ರಚುರ ಪಡಿಸುವ ಉದ್ದೇಶಕ್ಕಾಗಿ ಬೀದಿ ನಾಟಕ ಮತ್ತು ಜಾನಪದ ಸಂಗೀತ ಕಲಾತಂಡಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲಾ ಮಟ್ಟದಲ್ಲಿ ಅಧೀನ ಕಚೇರಿಗಳ ಮೂಲಕ 2025-26 ನೇ ಸಾಲಿನಲ್ಲಿ ಬೀದಿ ನಾಟಕ ಮತ್ತು ಜಾನಪದ ಸಂಗೀತ ಕಾರ್ಯಕ್ರಮಗಳನ್ನು ಏರ್ಪಡಿಸಲು ಅನುಕೂಲವಾಗುವಂತೆ ಪ್ರತಿ ಜಿಲ್ಲೆಯಿಂದ 3 ಬೀದಿ ನಾಟಕ ಹಾಗೂ 3 ಜಾನಪದ ಸಂಗೀತ ಕಲಾತಂಡಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

ಪ್ರತಿ ಬೀದಿ ನಾಟಕ ತಂಡದಲ್ಲಿ 8 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಇಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ವರ್ಗಕ್ಕೆ ಸೇರಿದ ಕಲಾವಿದರನ್ನು ಒಳಗೊಂಡಿರಬೇಕು.

ಪ್ರತಿ ಜಾನಪದ ಸಂಗೀತ ಕಲಾ ತಂಡದಲ್ಲಿ 3 ಜನ ಕಲಾವಿದರಿದ್ದು, ಅದರಲ್ಲಿ ಕಡ್ಡಾಯವಾಗಿ ಒಬ್ಬರು ಮಹಿಳೆಯರು ಹಾಗೂ ಒಬ್ಬರು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಠ ವರ್ಗಕ್ಕೆ ಸೇರಿದ ಕಲಾವಿದರು ಇರುವುದು ಖಡ್ಡಾಯವಾಗಿದೆ.

ಕಲಾ ತಂಡಗಳ ಆಯ್ಕೆ ಮಾಡಲು ಜಿಲ್ಲಾ ಮಟ್ಟದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ, ಪರಿಶಿಷ್ಟ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕೃಷಿ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನೊಳಗೊಂಡ ಸಮಿತಿ ರಚಿಸಲಾಗಿದ್ದು, 2025 ರ ಆಗಸ್ಟ್ 12 ರಂದು ಬೆಳಿಗ್ಗೆ 11 ಗಂಟೆಗೆ ರಾಜ್ಯಾದ್ಯಂತ 31 ಜಿಲ್ಲೆಗಳಲ್ಲಿ ಏಕಕಾಲಕ್ಕೆ ಆಯ್ಕೆ ಪ್ರಕ್ರಿಯೆ ನಡೆಸಲಾಗುತ್ತದೆ.

ಅದೇ ಆಗಸ್ಟ್ 12 ರಂದು, ನಿಗದಿತ ಸಮಯಕ್ಕೆ ಗದಗ ಜಿಲ್ಲೆಯ ಬೀದಿ ನಾಟಕ ಮತ್ತು ಜಾನಪದ ಸಂಗೀತ ಕಲಾ ತಂಡಗಳ ಆಯ್ಕೆ ಪ್ರಕ್ರಿಯೆಯು ಗದಗ ನಗರದ ಕೆ. ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣ ದಲ್ಲಿ ಜರುಗಲಿದೆ. ಆಸಕ್ತ ಅರ್ಹ ಬೀದಿ ನಾಟಕ ತಂಡಗಳು ಮತ್ತು ಜಾನಪದ ಸಂಗೀತ ಕಲಾ ತಂಡಗಳು ಆಗಸ್ಟ್ 01, 2025 ರ ಸಂಜೆ 5 ಗಂಟೆಯೊಳಗೆ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು ಎಂದು ಗದಗ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮೀನುಗಾರಿಕೆ ಇಲಾಖೆ ಗದಗ ವತಿಯಿಂದ 2025-26ನೇ ಸಾಲಿನ ಜಿಲ್ಲಾ ವಲಯದ ಮೀನು ಮಾರುಕಟ್ಟೆಗಳ ನಿರ್ಮಾಣ ಹಾಗೂ ಮೀನು ಮಾರಾಟಕ್ಕೆ ಸಹಾಯ ಯೋಜನೆಯಡಿ ದ್ವಿಚಕ್ರ ವಾಹನ ಮತ್ತು ಐಸ್ಬಾಕ್ಸ್ ಖರೀದಿಸಿದವರಿಗೆ ಸಹಾಯಧನ, ಒಳನಾಡು ಮೀನುಗಾರಿಕೆ ಅಭಿವೃದ್ಧಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ಮೀನುಗಾರರಿಗೆ ಉಚಿತವಾಗಿ ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಹಾಗೂ ಮೀನುಕೃಷಿಗೆ ಸಹಾಯಧನ (ಕೊಳ ನಿರ್ಮಾಣ ಮತ್ತು ಹೂಡಿಕೆ ವೆಚ್ಚ) ನೀಡಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು www.gadag.nic.in ಮೂಲಕ ದಿನಾಂಕ:07/08/2025 ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪ ನಿರ್ದೇಶಕರು ಗದಗ ಅಥವಾ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ/ಮುಂಡರಗಿ(ಮೊಬೈಲ್ ಸಂ: 8095792530) ರವರನ್ನು ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka